ಸಂಪುಟ : 8 ಸಂಚಿಕೆ : 276 ಪುಟ : 4 ಬೆಲೆ : 3.00 ಬುಧವಾರ ಡಿಸೆಂಬರ್ 13, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 276 Pages : 4 Price : 3.00 Wednesday December 13, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಸುವರ್ಣ ಸಂಭ್ರಮಾಚರಣೆ, ವಿಧಾನ ಮಂಡಲದ ಮಾಜಿ ಸಭಾಪತಿಗಳು, ಸಭಾಧ್ಯಕ್ಷರಿಗೆ ಸನ್ಮಾನ

# ಸ್ಪಷ್ಟ ದಿಕ್ಸೂಚಿಯೊಂದಿಗೆ ಮಹಾನ್ ಕರ್ನಾಟಕ, ಮಹಾನ್ ಭಾರತ ನಿರ್ಮಾಣವಾಗಲಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ದೇಶದಲ್ಲಿಯೇ ಅತಿಹೆಚ್ಚು ತೆರಿಗೆ ಪಾವತಿಸುವ 2ನೇ ರಾಜ್ಯ ಕರ್ನಾಟಕವಾಗಿರುವುದು ಇಲ್ಲಿನ ಉದ್ಯೋಗಶೀಲತೆಗೆ ಸಾಕ್ಷಿಯಾಗಿದೆ. ಉತ್ತರದ ಬೆಳಗಾವಿಯಿಂದ ದಕ್ಷಿಣದ ಬೆಂಗಳೂರಿನವರೆಗೆ ನಾಡು ವೈವಿಧ್ಯಮಯ ಐತಿಹಾಸಿಕ, ನೈಸರ್ಗಿಕ ತಾಣಗಳನ್ನು ಹೊಂದಿದೆ. ಮುಂಬರುವ 25 ವರ್ಷಗಳ ಅವಧಿಯಲ್ಲಿ ರಾಜ್ಯದ ಸರ್ವಾಂಗೀಣ ಪ್ರಗತಿಗೆ ಸ್ಪಷ್ಟ ದಿಕ್ಸೂಚಿಯನ್ನು ರಾಜ್ಯ ಹಾಕಿಕೊಂಡು ಮಹಾನ್ ಕರ್ನಾಟಕ, ಮಹಾನ್ ಭಾರತ ನಿರ್ಮಿಸಬೇಕು ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಮಂಗಳವಾರ ಸುವರ್ಣಸೌಧದ ಮುಂಭಾಗದಲ್ಲಿ ಕರ್ನಾಟಕ ವಿಧಾನ ಮಂಡಲವು ಹಮ್ಮಿಕೊಂಡಿದ್ದ ಕರ್ನಾಟಕ ನಾಮಕರಣ-50 ಸುವರ್ಣ ಸಂಭ್ರಮಾಚರಣೆ ಹಾಗೂ ಕರ್ನಾಟಕ ವಿಧಾನ ಮಂಡಲದ ಮಾಜಿ ಸಭಾಪತಿಗಳು ಹಾಗೂ ಸಭಾಧ್ಯಕ್ಷರುಗಳ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ ಐವತ್ತು ವರ್ಷಗಳ ಅವಧಿಯಲ್ಲಿ ರಾಜ್ಯವು ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿಯ ದಾಪುಗಾಲು ಹಾಕುತ್ತಿದೆ. ಪ್ರಾಚೀನ ಹಾಗೂ ಮಧ್ಯಕಾಲೀನ ಇತಿಹಾಸದ ಪುಟಗಳನ್ನು ತಿರುವಿದಾಗ ಈ ನಾಡು ಭವ್ಯ ಪರಂಪರೆ, ಭೌಗೋಳಿಕ ವ್ಯಾಪ್ತಿ ಹೊಂದಿತ್ತು ಎಂದು ತಿಳಿಯುತ್ತದೆ. ಶಿಕ್ಷಣ, ಔದ್ಯೋಗಿಕವಾಗಿಯೂ ರಾಜ್ಯ ಪ್ರಗತಿ ಸಾಧಿಸಿದೆ. ಕನ್ನಡ ಎಂಟು ಸಾಹಿತಿಗಳು ಜ್ಞಾನಪೀಠ ಪ್ರಶಸ್ತಿಗೆ ಭಾಜನರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ವರ್ಷವಿಡೀ ಅರ್ಥಪೂರ್ಣ ಸುವರ್ಣ ಸಂಭ್ರಮಾಚರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸ್ವಾತಂತ್ರ್ಯಾನಂತರ ವಿವಿಧ ಆಡಳಿತ ಪ್ರಾಂತ್ಯಗಳಲ್ಲಿ ಕನ್ನಡ ಭಾಷಿಕರು ಹರಿದು ಹಂಚಿ ಹೋಗಿದ್ದರು. ಅನೇಕ ಮಹನೀಯರ ತ್ಯಾಗ, ಬಲಿದಾನಗಳಿಂದ ಅಖಂಡ ಕರ್ನಾಟಕ ನಿರ್ಮಾಣ ಸಾಧ್ಯವಾಯಿತು. ಆ ಹೋರಾಟಗಾರರನ್ನೆಲ್ಲ ಸ್ಮರಿಸಬೇಕು. 1956ರಲ್ಲಿ ಒಂದುಗೂಡಿದರೂ ಕೂಡ ರಾಜ್ಯಕ್ಕೆ ಮೈಸೂರು ರಾಜ್ಯ ಎಂದೇ ಕರೆಯಲಾಗುತ್ತಿತ್ತು.

1973ರಲ್ಲಿ ಡಿ.ದೇವರಾಜ ಅರಸು ಅವರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿದ್ದು ಐತಿಹಾಸಿಕ ಕಾರ್ಯವಾಗಿದೆ. ಭಾಷೆಯ ಅಭಿಮಾನ ಇರಬೇಕು, ದುರಭಿಮಾನಗಳಾಗಬಾರದು. ಯಾವುದೇ ಭಾಷೆ ಕಲಿತರೂ ನಮ್ಮ ಮಾತೃ ಭಾಷೆ ಮರೆಯಬಾರದು ಎಂದರು.

ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ಮುಂದಿನ ಪೀಳಿಗೆಗೆ ಮಾದರಿಯಾಗಬಲ್ಲ ರಾಜ್ಯ ಮತ್ತು ಪರಂಪರೆಯನ್ನು ನೀಡುವ ಕೆಲಸ ಮಾಡಬೇಕು. ಪ್ರೀತಿ ಪೂರ್ವಕ, ದ್ವೇಷ ರಹಿತ ರಾಜ್ಯ ನಮ್ಮದು. ಆ ಹಿರಿಮೆ-ಗರಿಮೆಗಳನ್ನು ಎತ್ತಿ ಹಿಡಿಯಬೇಕು ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಹಿರಿಯರು ಸವೆಸಿದ ಹಾದಿ ಹಾಗೂ ಮಾರ್ಗದರ್ಶನ ಸದಾ ಕಾಲ ನಮಗೆ ಬೇಕು. ಸರ್ಕಾರ ಹಾಗೂ ವಿಧಾನಮಂಡಲದ ಸಮನ್ವಯ, ಸಹಕಾರದಿಂದ ಈ ಅರ್ಥಪೂರ್ಣ ಕಾರ್ಯಕ್ರಮ ಸಾಧ್ಯವಾಗಿದೆ ಎಂದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಮಾತನಾಡಿ, ರಾಜ್ಯವನ್ನು ಸಮಗ್ರವಾಗಿ ಗುರುತಿಸಬೇಕು, ಪ್ರಾದೇಶಿಕ ಭೇಧ ಭಾವಗಳಿಗೆ ಅವಕಾಶ ಉಂಟು ಮಾಡಬಾರದು. ರಾಜ್ಯದ ಅಖಂಡತೆ, ಏಕತೆಯನ್ನು ನಾವು ಉಳಿಸಬೇಕು ಎಂದರು.

▸▸ 3ನೇ ಪುಟಕ್ಕೆ



ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ವಿಧಾನಪರಿಷತ್ ಮಾಜಿ ಸಭಾಪತಿಗಳಾದ ಡಿ.ಹೆಚ್. ಶಂಕರಮೂರ್ತಿ, ವೀರಣ್ಣ ಮತ್ತಿಕಟ್ಟಿ, ಪ್ರೊ. ಬಿ.ಕೆ. ಚಂದ್ರಶೇಖರ, ವಿ.ಆರ್. ಸುದರ್ಶನ, ಬಿ.ಎಲ್. ಶಂಕರ್, ವಿಧಾನಸಭೆಯ ಮಾಜಿ ಸಭಾಧ್ಯಕ್ಷರುಗಳಾದ ಜಗದೀಶ್ ಶೆಟ್ಟರ್, ಕೆ.ಜಿ. ಬೋಪಯ್ಯ, ಕೆ.ಬಿ. ಕೋಳಿವಾಡ, ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಆಕರ್ಷಕ ಕಿನ್ನಾಳ ಚೌಕಿ ಕಲೆಯ ಸ್ಮರಣಿಕೆ, ಮೈಸೂರು ಪೇಟ ತೊಡಿಸಿ ಸನ್ಮಾನಿಸಲಾಯಿತು.

> 1973ರ ನವೆಂಬರ್ 1ರಂದು ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣವಾಯಿತು. ಕಳೆದ ಐವತ್ತು ವರ್ಷಗಳ ಅವಧಿಯಲ್ಲಿ ನಾಡಿನಲ್ಲಿ ಮಹತ್ವದ ಬದಲಾವಣೆಗಳು, ಅಭಿವೃದ್ಧಿಗಳಾಗಿವೆ. ಗಂಡು ಮೆಟ್ಟಿನ ನಾಡು ಬೆಳಗಾವಿಯ ಸುವರ್ಣಸೌಧದ ಎದುರಿನಲ್ಲಿ ಈ ಮಹತ್ವದ ಕಾರ್ಯಕ್ರಮ ನಡೆಯುತ್ತಿರುವುದು ಸಂತಸದ ಸಂಗತಿಯಾಗಿದೆ.
>
> **- ಎಚ್.ಕೆ. ಪಾಟೀಲ.**
> **ಕಾನೂನು, ಪ್ರವಾಸೋದ್ಯಮ ಸಚಿವರು.**

## 'ಕಲೋತ್ಸವ'ದಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಕಲೋತ್ಸವ ಸ್ಪರ್ಧೆಯಲ್ಲಿ ನಗರಸಭೆಯ ಸಂಯುಕ್ತ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಾನಪದ ನೃತ್ಯ ವಿಭಾಗದಲ್ಲಿ ರೋಹನ ಸಂಬರಗಿ, ಚಿತ್ರಕಲಾ ಸ್ಪರ್ಧೆ ಪೂರ್ಣಿಮಾ ಜಾಲಿಗಿಡದ ಪ್ರಥಮ ಸ್ಥಾನ ತಮ್ಮದಾಗಿಸಿಕೊಂಡಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ಹಾಗೂ ಮಾರ್ಗದರ್ಶನ ನೀಡಿದ ಶಾಲೆಯ ಚಿತ್ರಕಲಾ ಶಿಕ್ಷಕ ಟಿ.ಆರ್. ಬೇವಿನಮರದ ಇವರಿಗೆ ಪ್ರಾಚಾರ್ಯ ಎಸ್. ಎಸ್. ಕುಲಕರ್ಣಿ, ಶಿಕ್ಷಣ ಸ್ಥಾಯಿ ಕಮಿಟಿ ಚೇರಮನ್ ಪ್ರಕಾಶ್ ಅಂಗಡಿ ಹಾಗೂ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

## ತಾಮ್ರಗುಂಡಿ ಗ್ರಾಮದಲ್ಲಿ ಮೊಸಳೆ ಪ್ರತ್ಯಕ್ಷ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ


ಇಲ್ಲಿನ ಡಂಬಳ ಹೋಬಳಿ ವ್ಯಾಪ್ತಿಯ ತಾಮ್ರಗುಂಡಿ ಗ್ರಾಮದ ಸಣ್ಣ ನೀರಾವರಿ ಇಲಾಖೆಗೆ ಒಳಪಡುವ ಕೆರೆಯಲ್ಲಿ ಸಿಂಗಟಾಲೂರ ಏತ ನೀರಾವರಿ ಯೋಜನೆಯ ಹಮ್ಮಿಗಿ ಬ್ಯಾರೇಜ್‌ನಿಂದ ಬೃಹತ್ ಕಾಲುವೆ ಮೂಲಕ ಕೆರೆ ಭರ್ತಿಯಾಗಿತ್ತು. ಇದೀಗ, ಈ ಕೆರೆಯಲ್ಲಿ ಮೊಸಳೆ ಪ್ರತ್ಯಕ್ಷವಾಗಿದೆ ಎಂಬ ವಿಡಿಯೋ ಒಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಈ ಕುರಿತು ಪ್ರತಿಕ್ರಿಯಿಸಿದ ಗ್ರಾಮದ ಯಲ್ಲಪ್ಪ ಹುಲಗೇರಿ, ನಮ್ಮ ಗ್ರಾಮದ ಕೆರೆಯಲ್ಲಿ ಮೊಸಳೆ ಪ್ರತ್ಯಕ್ಷವಾಗಿದ್ದರಿಂದ ಜಾನುವಾರಗಳನ್ನು ಮೇಯಿಸುವವರು, ಕುರಿಗಾಹಿಗಳು ಹಾಗೂ ರೈತರು ಆತಂಕದಲ್ಲಿದ್ದಾರೆ. ಮೊಸಳೆಯಿಂದ ಅನಾಹುತ, ಪ್ರಾಣಾಪಾಯಗಳು ಸಂಭವಿಸುವ ಮುನ್ನ ಇಲಾಖೆಯ ಅಧಿಕಾರಿಗಳು ಮೊಸಳೆಯನ್ನು ಹಿಡಿದು ಬೇರೆಡೆ ಸ್ಥಳಾಂತರ ಮಾಡಬೇಕೆಂದು ಒತ್ತಾಯಿಸಿದ್ದಾರೆ.

## ಡಿ.14ಕ್ಕೆ ಗುತ್ತಿಗೆದಾರರಿಂದ ಮುಷ್ಕರ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಗುತ್ತಿಗೆದಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ದೃಷ್ಟಿಯಿಂದ ಡಿ.14ರಂದು ಸುವರ್ಣ ಗಾರ್ಡನ್ ಟೆಂಟ್ ನಂ-3ರಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ಒಂದು ದಿನದ ಮುಷ್ಕರ ಹಮ್ಮಿಕೊಳ್ಳಲಾಗಿದೆ.



ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಡಿ.ಕೆಂಪಣ್ಣ ನೇತೃತ್ವದಲ್ಲಿ ಮುಷ್ಕರ ನಡೆಯಲಿದ್ದು, ರಾಜ್ಯ ಸಂಘದ ಪದಾಧಿಕಾರಿಗಳು ಉಪಸ್ಥಿತರಿರುವರು. ಕಾರಣ, ಗುತ್ತಿಗೆದಾರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಮುಷ್ಕರದಲ್ಲಿ ಭಾಗವಹಿಸಿ ಗುತ್ತಿಗೆದಾರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೃಷ್ಟಿಯಿಂದ ಮುಷ್ಕರವನ್ನು ಯಶಸ್ವಿಗೊಳಿಸಬೇಕೆಂದು ಹಿರಿಯ ಜಿಲ್ಲಾ ಗೌರವಾಧ್ಯಕ್ಷ ಬಸವರಾಜ ಮಟಗಾರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ಸುವರ್ಣಸೌಧದ ಹೊರಾವರಣದಲ್ಲಿ 'ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವ'

## ಮಾತೃಭಾಷೆಯ ಮೇಲಿನ ಅಭಿಮಾನ ಇನ್ನಷ್ಟು ಹೆಚ್ಚಲಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ತ್ಯಾಗ ಮತ್ತು ಬಲಿದಾನದ ಮೂಲಕ ರಾಜ್ಯ ಏಕೀಕರಣಗೊಂಡು ಕನ್ನಡ ನಾಡಿನ ಉದಯವಾಯಿತು. ತ್ಯಾಗ ಮತ್ತು ಬಲಿದಾನಗಳ ಮೂಲಕ ಕನ್ನಡ ನಾಡು ರಚನೆಯಾಗಿದ್ದು, ಇದಕ್ಕೆ ಕಾರಣರಾದ ಎಲ್ಲರನ್ನೂ ಈ ಸಂದರ್ಭದಲ್ಲಿ ಮತ್ತೊಮ್ಮೆ ಸ್ಮರಿಸುತ್ತೇನೆ. ಕನ್ನಡ ನೆಲ-ಜಲ, ಭಾಷೆ, ಗಡಿ ರಕ್ಷಣೆಗೆ ನಾವು ಬದ್ಧರಾಗಿರುವುದು, ಕನ್ನಡ ವಾತಾವರಣ ನಿರ್ಮಾಣ ಮಾಡಿ ಇದನ್ನು ವಿಸ್ತರಿಸುವತ್ತ ಕಾರ್ಯಪ್ರವೃತ್ತರಾಗುವುದೇ ತ್ಯಾಗ-ಬಲಿದಾನಗೈದ ಏಕೀಕರಣದ ಹೋರಾಟಗಾರರಿಗೆ ನಾವು ಕೊಡುವ ಗೌರವವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.


ಸುವರ್ಣಸೌಧದ ವೈಭವದ ಹೊರ ಆವರಣದಲ್ಲಿ ನಡೆದ 'ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾನು ಮೊದಲ ಕನ್ನಡ ಕಾವಲು ಸಮಿತಿಯ ಅಧ್ಯಕ್ಷನಾಗಿದ್ದೆ. ಕನ್ನಡವನ್ನು ಆಡಳಿತ ಭಾಷೆಯನ್ನಾಗಿಸುವುದಕ್ಕೆ ಎಲ್ಲರೂ ಶ್ರಮಿಸಿದ್ದೇವೆ. ಸಮಸ್ತ ಕನ್ನಡಿಗರು ಮಾತೃಭಾಷೆಯ ಮೇಲಿನ ಅಭಿಮಾನವನ್ನು ಹೆಚ್ಚಿಸಿಕೊಂಡಾಗ ಮಾತ್ರ ಕನ್ನಡದ ಬದುಕು ಇನ್ನಷ್ಟು ವಿಸ್ತರಿಸುತ್ತದೆ ಎಂದರು.

ಸುವರ್ಣಸೌಧದಲ್ಲಿ ಕ್ಯಾಬಿನೆಟ್ ಸಭೆಗಳನ್ನು ನಡೆಸಬೇಕು ಎನ್ನುವುದೂ ಸೇರಿ ಬಿ.ಎಲ್. ಶಂಕರ್ ಅವರು ನೀಡಿದ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಆ ಬಗ್ಗೆ ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

ಕರ್ನಾಟಕ ವಿಧಾನ ಮಂಡಲ ಆಯೋಜಿಸಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮದ ಅಂಗವಾಗಿ ವಿಧಾನ ಮಂಡಲದ ಮಾಜಿ ಸಭಾಪತಿ ಮತ್ತು ಸಭಾಧ್ಯಕ್ಷರುಗಳನ್ನು ಮುಖ್ಯಮಂತ್ರಿಗಳು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಜಗದೀಶ್ ಶೆಟ್ಟರ್, ಪ್ರೊ. ಬಿ.ಕೆ. ಚಂದ್ರಶೇಖರ್, ವಿ.ಆರ್. ಸುದರ್ಶನ್, ಬಿ.ಎಲ್. ಶಂಕರ್, ಡಿ.ಹೆಚ್. ಶಂಕರಮೂರ್ತಿ, ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ಹಲವು ಗಣ್ಯರನ್ನು ಸನ್ಮಾನಿಸಲಾಯಿತು.




ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕಾರ್ಯಕ್ರಮ ಉದ್ಘಾಟಿಸಿದರು. ವೇದಿಕೆಯಲ್ಲಿ ಸ್ಪೀಕರ್ ಯು.ಟಿ. ಖಾದರ್, ಸಭಾಪತಿ ಬಸವರಾಜ ಹೊರಟ್ಟಿ, ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಕಾನೂನು, ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

### ವಿಧಾನಪರಿಷತ್‌ನಲ್ಲಿ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಭರವಸೆ

## ಅವ್ಯವಸ್ಥೆ ಸರಿಪಡಿಸಿ ಆಸ್ಪತ್ರೆಗಳಿಗೆ ಜೀವ ರಕ್ಷಕ ಔಷಧಿ ಪೂರೈಕೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸರ್ಕಾರಿ ಆಸ್ಪತ್ರೆಗಳಿಗೆ ಜೀವ ರಕ್ಷಕ ಔಷಧಿ ಪೂರೈಕೆಯಲ್ಲಿ ಆಗುವ ವಿಳಂಬವನ್ನು ತಪ್ಪಿಸಿ, ಶೀಘ್ರವಾಗಿ ಔಷಧಿಯ ಪೂರೈಕೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ ಗುಂಡೂರಾವ್ ಹೇಳಿದರು.

ವಿಧಾನ ಪರಿಷತನಲ್ಲಿ ಸದಸ್ಯೆ ಹೇಮಲತಾ ನಾಯಕ ಅವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯದ ಬಗ್ಗೆ ಮಾತನಾಡಿದ ಸಚಿವರು, ಆಸ್ಪತ್ರೆಗಳಲ್ಲಿ ನಿಗದಿತ ಸಮಯಕ್ಕೆ ಔಷಧಿ ಸಿಗುವುದಿಲ್ಲ ಎನ್ನುವುದು ಗಂಭೀರ ವಿಷಯಾಗಿದೆ. ಆಸ್ಪತ್ರೆಗಳಿಗೆ ಸಕಾಲಕ್ಕೆ ಔಷಧಿ ಪೂರೈಸಬೇಕಾಗಿರುವುದು ನಮ್ಮ ಮೂಲ ಜವಾಬ್ದಾರಿಯಾಗಿದೆ.

ಆಸ್ಪತ್ರೆಗಳಿಗೆ ಶೇ.35ರಷ್ಟು ಮಾತ್ರ ಔಷಧಿ ಪೂರೈಕೆಯಾಗುತ್ತಿದೆ. ಟೆಂಡರ್ ಮೂಲಕ ಔಷಧಿ ಖರೀದಿಸುವ ಪ್ರಕ್ರಿಯೆಯಲ್ಲಿ ಸರಬರಾಜುದಾರರು ಭಾಗಿಯಾಗುತ್ತಿಲ್ಲ, ಈ ಪ್ರಕ್ರಿಯೆಯಲ್ಲಿ ಅವ್ಯವಸ್ಥೆ ಉಂಟಾಗಿದೆ ಎನ್ನಲಾಗುತ್ತಿದ್ದು ಈ ಅವ್ಯವಸ್ಥೆಯನ್ನು ಎರಡ್ಮೂರು ತಿಂಗಳೊಳಗೆ ಸರಿಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.



ಆಸ್ಪತ್ರೆಗಳಲ್ಲಿ ಕೆಲವೊಂದು ಪ್ರಮುಖ ಔಷಧಿಗಳು ಸದಾಕಾಲ ಲಭ್ಯತೆಯಲ್ಲಿರುವಂತೆ ನೋಡಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ಕೆಲ ಪ್ರಮುಖ ಔಷಧಿಗಳನ್ನು ಖರೀದಿಸಲು ಈಗಾಗಲೇ ಸೂಚನೆ ನೀಡಲಾಗಿದೆ.

ಆಸ್ಪತ್ರೆಗಳಲ್ಲಿ ಔಷಧಿಯು ಸಾರ್ವಜನಿಕರಿಗೆ ಉಚಿತವಾಗಿ ಲಭ್ಯವಾಗಬೇಕು. ಔಷಧಿ ಪೂರೈಕೆ ಟೆಂಡರ್ ಪ್ರಕ್ರಿಯೆಯಲ್ಲಿ ಅರ್ಹ ಸರಬರಾಜುದಾರರು ಮುಕ್ತವಾಗಿ ಭಾಗಿಯಾಗಬೇಕು. ಸರಿಯಾದ ಸಮಯಕ್ಕೆ ಔಷದಿ ಸರಬರಾಜು ಆಗಬೇಕು ಎಂಬುದು ನಮ್ಮ ಉದ್ದೇಶವಾಗಿದ್ದು ಈ ನಿಟ್ಟಿನಲ್ಲಿ ಈಗಿರುವ ಅವ್ಯವಸ್ಥೆಯನ್ನು ಸರಿಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ಕೆಎಸ್‌ಎಂಎಸ್‌ಸಿಎಲ್ ಔಷಧಿಗಳನ್ನು ಖರೀದಿಸಿ ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಸಿಲ್ಲ. ಇದರಿಂದಾಗಿ ಹಾವು, ನಾಯಿ ಕಡಿತದಂತಹ ಚಿಕಿತ್ಸೆಗಳು ಮಾತ್ರವಲ್ಲದೇ ಕ್ಯಾನ್ಸರ್, ಹೃದಯಘಾತ ಮೊದಲಾದ ಗಂಭೀರ ಕಾಯಿಲೆಗಳಿಗೆ ಬಳಸುವ ಜೀವ ರಕ್ಷಕ ಔಷಧಿಗಳು ಸಿಗದೇ ಬಡ ರೋಗಿಗಳು ಪರದಾಡುವಂತಾಗಿದೆ. ಔಷಧಿ ಪೂರೈಕೆ ಟೆಂಡರ್ ಪ್ರಕ್ರಿಯೆಯನ್ನು ಇನ್ನು ಮುಗಿಸಿಲ್ಲ. ಬಡ ರೋಗಿಗಳು ವೈದ್ಯರು ಬರೆದು ಕೊಡುವ ಔಷಧಿಗಳನ್ನು ಹೊರಗಡೆ ದುಬಾರಿ ಬೆಲೆ ತೆತ್ತು ಖರೀದಿಸಬೇಕಿದೆ. ಇದಕ್ಕ ಸೂಕ್ತ ಕ್ರಮ ವಹಿಸಬೇಕು ಎಂದು ಸದಸ್ಯರಾದ ಹೇಮಲತಾ ನಾಯಕ ಅವರು ಶೂನ್ಯವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದರು.

## ಶ್ರೀ ದ್ಯಾಮವ್ವ ದೇವಿಯ ಜಾತ್ರೆ, ಕಳಸಾರೋಹಣ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲದ ಗ್ರಾಮ ದೇವತೆ ಶ್ರೀ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವ ಹಾಗೂ ಕಳಸಾರೋಹಣ ಕಾರ್ಯಕ್ರಮಗಳು ಡಿ. 11ರಂದು ಪ್ರಾರಂಭಗೊಂಡಿದ್ದು, ಡಿ.15ರವರೆಗೆ ನಡೆಯಲಿದೆ.

ಜಾತ್ರಾ ಮಹೋತ್ಸವದ ನಿಮಿತ್ತ ಡಿ.13ರಂದು ಸಂಜೆ 6ಕ್ಕೆ ಸೂಡಿಯ ಚಿದಂಬರೇಶ್ವರ ದೇವಸ್ಥಾನದ ಅರ್ಚಕ ಭುಜಂಗಶರ್ಮಾ ಜೋಷಿ ಶ್ರೀದೇವಿ ಮಹಾತ್ಮೆ ಕುರಿತು ಪ್ರವಚನ ನೀಡಲಿದ್ದಾರೆ. ಡಾ. ಆರ್.ಕೆ. ಗಚ್ಚಿನಮಠ ಅಧ್ಯಕ್ಷತೆ ವಹಿಸುವರು. ನಿವೃತ್ತ ಪ್ರಾಚಾರ್ಯೆ ಕವಿತಾ ಕಾಶಪ್ಪನವರ 'ಜೀವನದಲ್ಲಿ ಹಾಸ್ಯ' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ವೀರನಗೌಡ ಪಾಟೀಲ ಪಾಲ್ಗೊಳ್ಳುವರು. ಡಿ.14ರಂದು ಸಂಜೆ 6ಕ್ಕೆ ಪರಿಸರ ತಜ್ಞ ಶಿವಾನಂದ ಕಳವೆ 'ಜಲಸಂರಕ್ಷಣೆಯಲ್ಲಿ ನಮ್ಮ ಪಾತ್ರ' ಕುರಿತು, ಕೊಪ್ಪಳದ ಅಯೋಧ್ಯಾ ಕ್ರಾಪ್ಸ್ ಅಕಾಡೆಮಿ ಸಂಸ್ಥಾಪಕ ಮಹಾಂತೇಶ ಪಾಟೀಲ 'ಸಾವಯವ ಕೃಷಿ' ಎಂಬ ವಿಷಯದಲ್ಲಿ ಉಪನ್ಯಾಸ ನೀಡುವರು. ವೆಂಕಣ್ಣ ಕುಲಕರ್ಣಿ(ವೈದ್ಯ) ಅಧ್ಯಕ್ಷತೆ ವಹಿಸುವರು. ಸಮಾಜ ಸೇವಕ ಜಗದೀಶ ಸಂಕನಗೌಡ್ರ ಪಾಲ್ಗೊಳ್ಳುವರು.

ಡಿ.15ರ ಬೆಳಿಗ್ಗೆ ಕಳಸಾರೋಹಣ ಕಾರ್ಯಕ್ರಮದ ಸಾನ್ನಿಧ್ಯವನ್ನು ಹಾಲಕೆರೆ ಮುಪ್ಪಿನ ಬಸವಲಿಂಗ ಸ್ವಾಮೀಜಿ ವಹಿಸುವರು. ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಕಳಸಾರೋಣ ನೇರವೇರಿಸುವರು. ಹೆಬ್ಬಳ್ಳಿ ಚೈತನ್ಯಾಶ್ರಮದ ಪ.ಪೂ ದತ್ತಾವಧೂತ ಮಹಾರಾಜರು ನೇತೃತ್ವ ವಹಿಸುವರು. ಮುರನಾಳದ ಮಳೆರಾಜೇಂದ್ರ ಸ್ವಾಮಿ ಮಠದ ಜಗನ್ನಾಥ ಸ್ವಾಮೀಜಿಗ ಸಮ್ಮುಖ ವಹಿಸುವರು. ಸಂಜೆ 6ಕ್ಕೆ ಹುಬ್ಬಳ್ಳಿಯ ರಕ್ಷಾ ಜೋಷಿ, ನರೇಗಲ್ಲದ ಸಿಂಧೂ ಪಾಟೀಲ, ಸಮೀಕ್ಷಾ ಕಳಕಣ್ಣವರ ಅವರಿಂದ ಭರತನಾಟ್ಯ ಕಾರ್ಯಕ್ರಮ ಜರುಗುವುದು.

ಪ್ರತಿನಿತ್ಯ ಬೆಳಿಗ್ಗೆ ಶ್ರೀ ವೀರಭದ್ರೇಶ್ವರ ದೇವರಿಗೆ ಲಘು ರುದ್ರಾಭಿಷೇಕ, ಪಂಚಾಮೃತ ಅಭಿಷೇಕ ವಿಶೇಷ ಪೂಜೆ, ನಂತರ ಶತಚಂಡಿ ಪಾರಾಯಣ, ಡಿ.13ರಂದು ಮಧ್ಯಾಹ್ನ 12.30ಕ್ಕೆ ಶತಚಂಡಿ ಪೂರ್ಣಾಹುತಿ ಜರುಗಲಿದೆ.

## ಸಾಕ್ಷಿ ಸುಭಾಷಿತ

ಅಧಿಕಾರದಲ್ಲಿರುವಂಥ ವ್ಯಕ್ತಿಯು ಹೊಗಳುಭಟರನ್ನು ದೂರವಿಟ್ಟು ಟೀಕಿಸುವವರನ್ನು ಸ್ವಾಗತಿಸಬೇಕು

–ಬುದ್ಧಿಮಾತು

## ಸಂಪಾದಕೀಯ

### ರಾಜ್ಯದ ಜನರ ಸಮಸ್ಯೆಗೆ ಧ್ವನಿಯಾಗದ ಪ್ರತಿಪಕ್ಷ ಬಿಜೆಪಿ

ಅಧಿಕಾರದಲ್ಲಿದ್ದಾಗ ಜನರ ಸಮಸ್ಯೆಗೆ ಸ್ಪಂದಿಸದೆ ಪರಸ್ಪರ ಆರೋಪ ಪ್ರತ್ಯಾರೋಪಗಳಿಂದ ಆಡಳಿತ ವಿರೋಧಿ ಅಲೆ ಸೃಷ್ಟಿಗೆ ಕಾರಣವಾದ ಬಿಜೆಪಿ, ಇವತ್ತು ಪ್ರತಿಪಕ್ಷದ ಸಾಲಿನಲ್ಲಿದೆ.

ಆದರೂ ಜನರ ಅಶೋತ್ತರಗಳಿಗೆ ಪ್ರತಿಪಕ್ಷ ಬಿಜೆಪಿ ಧ್ವನಿಯಾಗುತ್ತಿಲ್ಲ. ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಉತ್ತರದ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಬಿಜೆಪಿ ಪರಸ್ಪರ ಕಚ್ಚಾಟದಲ್ಲಿ ತೊಡಗಿದೆ.

ಬರ ಕಾಮಗಾರಿ ಮತ್ತು ಬರ ಪರಿಹಾರ ವಿತರಣೆ ಕುರಿತಂತೆ ಸದನದಲ್ಲಿ ಚರ್ಚೆ ನಡೆದಿದ್ದು ಬಿಟ್ಟರೆ ಇನ್ನಿತರ ಗಂಭೀರ ವಿಷಯಗಳ ಬಗ್ಗೆ ಬಿಜೆಪಿ ಸದನದ ಗಮನ ಸೆಳೆಯುವ ಕೆಲಸ ಮಾಡಿಲ್ಲ. ಪ್ರತಿಪಕ್ಷ ನಾಯಕ ಆರ್ ಅಶೋಕ್ ಮತ್ತು ಬಿಜೆಪಿಯ ಸದಸ್ಯರ ನಡುವೆ ಹೊಂದಾಣಿಕೆ ಕೊರತೆಯಿಂದಾಗಿ ಕೆಲವರು ಸದನದಿಂದ ಹೊರ ನಡೆದರೆ, ಇನ್ನೂ ಕೆಲವರು ಸದನದ ಬಾವಿಗಳಿಗೆ ಹೋರಾಟ ನಡೆಸಬೇಕೆಂದು ಬಹಿರಂಗವಾಗಿದ್ದಾರೆ.

ಈ ರಾಜಕೀಯ ಪ್ರಹಸನದ ನಂತರವೂ ಬಿಜೆಪಿಯಲ್ಲಿ ಎಲ್ಲವೂ ಸರಿಯಲ್ಲ ಎನ್ನುವುದು ಸ್ಪಷ್ಟವಾಗಿದೆ. ಬಸನಗೌಡ ಪಾಟೀಲ್ ಯತ್ನಾಳ್ ಮತ್ತೊಮ್ಮೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಪ್ರತಿಪಕ್ಷ ನಾಯಕ ಆರ್ ಅಶೋಕ್ ವಿರುದ್ಧ ಹಿರಿಯ ಶಾಸಕ ವಿಶ್ವನಾಥ್ ಗುಡುಗಿದ್ದಾರೆ. ಇನ್ನು ಚುನಾವಣೆಯಲ್ಲಿ ಸೋತು ಸಣ್ಣವಾಗಿರುವ ವಿ. ಸೋಮಣ್ಣ ಮತ್ತು ಬೆಳಗಾವಿಯ ರಮೇಶ್ ಜಾರಕಿಹೊಳಿ ಬಿಜೆಪಿಯಿಂದ ದೂರವೇ ಉಳಿದಿದ್ದಾರೆ.

ಚಳಿಗಾಲದ ಅಧಿವೇಶನದಲ್ಲಿ ಬಿಜೆಪಿ ಕಮಲದ ದಳಗಳು ಒಂದೊಂದಾಗಿ ಸಡಿಲುಗೊಳ್ಳುತ್ತಿರುವುದು ಕಮಲ ಪಕ್ಷಕ್ಕೆ ಹೆಸರು ತರುತ್ತಿವೆ. ಶಿಸ್ತಿಗೆ ಹೆಸರಾದ ಬಿಜೆಪಿ, ಅಧಿವೇಶನದ ಕೊನೆಯ ಎರಡು ದಿನವಾದರೂ ರಾಜಕೀಯ ಬದಿಗಿಟ್ಟು, ಗಂಭೀರ ವಿಷಯಗಳ ಕುರಿತು ಚರ್ಚೆಗೆ ಮುಂದಾಗಬೇಕಿದೆ.

'ದುಬೈ ಗಡಿನಾಡ ಉತ್ಸವ' ಉದ್ಘಾಟಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ

# ದುಬೈ ಕನ್ನಡಿಗರ ಅಭಿಮಾನಕ್ಕೆ ಬೆಲೆ ಕಟ್ಟಲಾಗದು




■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಗತ್ತಿನಾದ್ಯಂತ ಕನ್ನಡಿಗರು ಆಯಾ ನಾಡಿನಲ್ಲಿ ಮನೆಮಾತಾಗುವ ಮೂಲಕ ಕನ್ನಡದ ಸಿರಿಯನ್ನು ಹೆಚ್ಚಿಸಿದ್ದಾರೆ. ಅದೇ ರೀತಿ ದುಬೈಯಲ್ಲಿಯೂ ಸಾಕಷ್ಟು ಕನ್ನಡಿಗರು ನೆಲೆಯೂರುವ ಮೂಲಕ ಕನ್ನಡದ ಕಂಪನ್ನು ಹರಡಿ ಕನ್ನಡಾಭಿಮಾನ ಮೆರೆದಿದ್ದಾರೆ. ಹೀಗಾಗಿ ಅವರ ಪ್ರೀತಿಗೆ ಅಭಿಮಾನಕ್ಕೆ ಬೆಲೆಕಟ್ಟಲಾಗದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಸಂತಸ, ಅಭಿಮಾನ ವ್ಯಕ್ತಪಡಿಸಿದರು.

ಅವರು ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ವತಿಯಿಂದ ವುಡ್‌ಲೆಮ್ ಪಾರ್ಕ್ ಶಾಲಾ ಆವರಣದಲ್ಲಿ ಆಯೋಜಿಸಿದ್ದ 'ದುಬೈ ಗಡಿನಾಡ ಉತ್ಸವ' ಕಾರ್ಯಕ್ರಮ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕರ್ನಾಟಕದ ಸಂಸ್ಕೃತಿ ಇಡೀ ಜಗತ್ತಿಗೆ ಮಾದರಿಯಾಗಿರುವುದರಿಂದ ಎಲ್ಲರೂ, ಎಲ್ಲೆಡೆಯೂ ಕನ್ನಡಗಿರನ್ನು ಪ್ರೀತಿಸಿ ಗೌರವಿಸಿದ್ದನ್ನು ನಾನು ಕಂಡಿದ್ದೇನೆ. ನನ್ನ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ 25ಕ್ಕೂ ಹೆಚ್ಚು ದೇಶಗಳಿಗೆ ಭೇಟಿ ನೀಡಿದ್ದೇನೆ. ಎಲ್ಲಿ ಹೋದರೂ ಕನ್ನಡಿಗರು ಸಿಕ್ಕೇ ಸಿಗುತ್ತಾರೆ. ಬೇರೆ ಬೇರೆ ದೇಶದಲ್ಲಿ ವಾಸಿಸುತ್ತಿದ್ದರೂ ಕನ್ನಡ ಕುವರರು ಕನ್ನಡಾಭಿಮಾನವನ್ನು ಬಿಟ್ಟುಕೊಟ್ಟಿಲ್ಲ. ಇದು ಇಡೀ ಕನ್ನಡಿಗರಿಗೆಲ್ಲ ಹೆಮ್ಮೆ ಎಂದರು.

ದುಬೈಯಲ್ಲಿ ವಾಸಿಸಿರುವ ಲಕ್ಷಾಂತರ ಕನ್ನಡಿಗರು ಕನ್ನಡಪರ ಸಂಘಟನೆಗಳನ್ನು ಕಟ್ಟಿಕೊಂಡು ಕನ್ನಡ ನಾಡಿನ ಸಂಸ್ಕೃತಿ, ಭಾಷೆ, ಆಹಾರ ಪದ್ಧತಿಗಳು ಹೀಗೆ ಎಲ್ಲವನ್ನೂ ಅಲ್ಲಿ ಬಿತ್ತರಿಸುವ ಮೂಲಕ ಇಲ್ಲಿನ ನೆಲವನ್ನೂ ಕನ್ನಡಮಯವಾಗಿ ಮಾಡಿದ್ದು ನನಗಂತೂ ಸಾಕಷ್ಟು ಖುಷಿ ತಂದಿದೆ.

ಪ್ರತಿ ವರ್ಷ ಗಡಿನಾಡು ಉತ್ಸವ ಮಾಡುವ ಮೂಲಕ ಕನ್ನಡದ ವಾತಾವರಣವನ್ನು ಹೆಚ್ಚೆಚ್ಚು ಈ ಪ್ರದೇಶದಲ್ಲಿ ಬಿತ್ತರಿಸಿ ಕರ್ನಾಟಕದ ಗೌರವ ಹೆಚ್ಚಿಸುತ್ತಿರುವ ಇಲ್ಲಿನ ಕನ್ನಡಿಗರಿಗೆ ಕರ್ನಾಟಕದ ಪರವಾಗಿ ವಿಶೇಷ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ನನಗೆ ಇಲ್ಲಿನ ಕನ್ನಡಿಗರ ಪ್ರೀತಿ ಮಾತೃ ವಾತ್ಸಲ್ಯದ ತೃಪ್ತಿ ನೀಡಿದೆ. ಕರ್ನಾಟಕದಲ್ಲಿಯೇ ಇದ್ದೇನೆ ಎಂಬ ಭಾವ ನನಗೆ ಮೂಡಿದೆ.

ಈ ಗಡಿನಾಡು ಉತ್ಸವದಲ್ಲಿ, ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚೆಚ್ಚು ಉತ್ಕೃಷ್ಟ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಒಂದು ಮಾದರಿ ಸಂಘಟನೆಯಾಗಿ ಬೆಳೆಯಲಿ. ಇದಕ್ಕೆ ನನ್ನ ಸಂಪೂರ್ಣ ಸಹಕಾರ ಇದೆ ಎಂದು ಬಸವರಾಜ ಹೊರಟ್ಟಿ ಹೇಳಿದರು.

ಈ ಸಂದರ್ಭದಲ್ಲಿ ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ಅಧ್ಯಕ್ಷ ನ್ಯಾಯವಾದಿ ಇಬ್ರಾಹಿಂ ಖಲೀಲ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ್, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಿಕರಾದ ಝುಡ್ ಎ.ಖೈಯಾರ, ವಿಜಯಕುಮಾರ ಶೆಟ್ಟಿ, ಗಾಣದಮೂಲೆ, ಮಜೀಬೈಲು, ಎ.ಆರ್. ಸುಬ್ಬಯ್ಯಕಟ್ಟೆ, ನವೀನಗೌಡ ಮುಂತಾದವರು ಉಪಸ್ಥಿತರಿದ್ದರು.

ಬೀಚಿ ಬಳಗದ ದಶಮಾನೋತ್ಸವ ಸಂಭ್ರಮದಲ್ಲಿ ಹಿರೇಮಗಳೂರು ಕಣ್ಣನ್ ಅಭಿಮತ

# ಬೀಚಿ ಸಾಹಿತ್ಯದ ರುಚಿ ಸವಿದವರೇ ಬಲ್ಲರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೀಚಿ ಈ ನಾಡು ಕಂಡ ಅಪರೂಪದ ಸಾಹಿತಿ. ವಿಡಂಬನೆಯ ಮೂಲಕ ಸತ್ಯವನ್ನು ಇತರರ ಮನಸ್ಸಿಗೆ ನೋವಾಗದಂತೆ ಹೇಳುವ ಕಲೆ ಅವರಿಗೆ ಕರಗತವಾಗಿತ್ತು. ಅವರ ಎಂದು ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್ ಹೇಳಿದರು.



ಪಟ್ಟಣದ ಹಿರೇಮಠದ ಸಭಾಭವನದಲ್ಲಿ ರವಿವಾರ ಸಂಜೆ ನಡೆದ ಬೀಚಿ ಬಳಗದ ದಶಮಾನೋತ್ಸವ ಸಂಭ್ರಮದಲ್ಲಿ ಅವರು 'ಹಾಸ್ಯ ಬ್ರಹ್ಮ ಬೀಚಿ (ನಗುನಗುತಾ ಬಾಳೋಣ)' ಸಂಸ್ಮರಣ ಗ್ರಂಥವನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ಕೇವಲ ನಗುವುದಕ್ಕೆ ಅಥವಾ ಹಾಸ್ಯಕ್ಕಷ್ಟೇ ಬೀಚಿಯವರನ್ನು ಸೀಮಿತಗೊಳಿಸಬೇಡಿ. ಹಾಸ್ಯದ ಹಿಂದಿರುವ ಸಂದೇಶವನ್ನೂ ಗಮನಿಸಬೇಕು. ಮಾತ್ರೆ ತೆಗೆದುಕೊಳ್ಳುವಾಗ ಮಗು ರಚ್ಚೆ ಹಿಡಿದರೆ ತಾಯಿ ಹೇಗೆ ಸಕ್ಕರೆಯನ್ನು ಕೊಟ್ಟು ಮಾತ್ರೆ ನುಂಗಿಸುತ್ತಾಳೆಯೋ ಹಾಗೆಯೆ ಬೀಚಿ ಈ ಜಗತ್ತಿನ ಮೌಢ್ಯವನ್ನು ಕಳೆಯಲು ನಗೆಯ ಮಾತ್ರೆಗಳನ್ನು ನೀಡಿದ್ದಾರೆ ಎಂದು ಕಣ್ಣನ್ ಹೇಳಿದರು.

ಒಂದು ಸಂಘಟನೆ ಹತ್ತು ವರ್ಷಗಳ ಕಾಲ ಸಾಗಿ ಬರುವುದು ಸುಲಭದ ಮಾತೇನಲ್ಲ. ಎಲ್ಲರನ್ನೂ ಹಿಡಿದಿಟ್ಟುಕೊಂಡು ಸಂಘಟನೆಯನ್ನು ಮುನ್ನಡೆಸಿ ಕೊಂಡು ಹೋಗುವುದು ಎಷ್ಟು ಜವಾಬ್ದಾರಿಯ ಕೆಲಸವೋ, ಅಷ್ಟೇ ಕಷ್ಟದಾಯಕವಾದ ಕೆಲಸ. ಆದರೆ ಇಲ್ಲಿನ ಬೀಚಿ ಬಳಗದ ಸದಸ್ಯರು ಅಂತಹ ಯಾವ ದುರ್ಬುದ್ಧಿಗೂ ಬೀಳದಂತೆ ಎಲ್ಲರೂ ಒಂದೇ ಕುಟುಂಬದವರಂತೆ ಹತ್ತು ವರ್ಷಗಳ ಕಾಲ ಈ ಮನೆಯನ್ನು ನಡೆಸಿಕೊಂಡು ಬಂದಿರುವುದು ಹೆಮ್ಮೆಯಾಗಿದೆ ಎಂದರು.

ದಶಮಾನ ಸಂಭ್ರಮವನ್ನು ಉದ್ಘಾಟಿಸಿ ಮಾತನಾಡಿದ ಮುಖಂಡ ಮಿಥುನ ಪಾಟೀಲ, ರಾಜ್ಯದಲ್ಲಿ ಎಲ್ಲಿಯೂ ಇಲ್ಲದ ಬೀಚಿ ಬಳಗ ಇಲ್ಲಿರುವುದು ಹೆಮ್ಮೆಯ ಸಂಗತಿ. ಈ ಬಳಗದ ಕಾರ್ಯಗಳು ಹೀಗೆಯೇ ಯಶಸ್ವಿಯಾಗಿ ನಡೆಯಲಿ ಎಂದು ಹಾರೈಸಿದರು.

ಜೀವನದಲ್ಲಿ ಮನುಷ್ಯ ಮುಖ್ಯವಾಗಿ ನಾಲ್ಕನ್ನು ಎಂದಿಗೂ ಮರೆಯಬಾರದು. ತಂದೆ, ತಾಯಿ, ತಾಯಿನಾಡು, ಮಾತೃ ಭಾಷೆ. ಇವುಗಳನ್ನು ಮರೆತರ ನಮ್ಮ ಜೀವನವೆ ವ್ಯರ್ಥ. ಬೀಚಿ ಬಳಗವು ಇಲ್ಲಿಯವರೆಗೆ ಹಲವಾರು ಸಾಹಿತ್ತಿಕ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಾಡುತ್ತ ಬಂದಿದೆ. ಗ್ರಾಮದಲ್ಲಿ ಹೆಚ್ಚೆಚ್ಚು ಸಾಹಿತ್ತಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತ ಹೋದಂತೆ ಆ ಗ್ರಾಮ ಸಾಂಸ್ಕೃತಿಕವಾಗಿ ಶ್ರೀಮಂತವಾಗುತ್ತದೆ. ಅಂತಹ ಮಹತ್ತರ ಕಾರ್ಯವನ್ನು ಈ ಹತ್ತು ವರ್ಷಗಳಲ್ಲಿ ಬೀಚಿ ಬಳಗ ಮಾಡಿದೆ ಎಂದು ಕಣ್ಣನ್ ಅಭಿಮಾನ ವ್ಯಕ್ತಪಡಿಸಿದರು.

ಸಾನ್ನಿಧ್ಯ ವಹಿಸಿದ್ದ ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಬೀಚಿ ಬಳಗವು ಶ್ರೀಮಠದ ಆಶ್ರಯದಲ್ಲಿ ದಶಮಾನೋತ್ಸವದವರೆಗೆ ಬೆಳೆದು ನಿಂತಿರುವುದು ಸಂತಸವಾಗಿದೆ. ಈ ಬಳಗದ ಕಾರ್ಯಕ್ಕೆ ಶ್ರೀಮಠದ ಬೆಂಬಲ ಎಂದಿಗೂ ಇದೆ ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಆಶೀರ್ವಚನ ನೀಡಿ, ನಮ್ಮ ಹಿಂದಿನ ಗುರುಗಳಾಗಿದ್ದ ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ಆಶೀರ್ವಾದ ಈ ಬಳಗದ ಮೇಲೆ ಸದಾ ಇತ್ತು ಎಂಬುದು ನಮಗೆ ಅಭಿಮಾನದ ಸಂಗತಿ. ಈ ಸಂದರ್ಭದಲ್ಲಿ ಸ್ಮರಣ ಸಂಚಿಕೆ ಬಿಡುಗಡೆ ಮಾಡಿರುವುದು ಒಂದು ಮೈಲಿಗಲ್ಲಿಗೆ ಸಾಕ್ಷಿಯಾಗಿದೆ ಎಂದರು.

ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಹಾಸ್ಯ ದಿಗ್ಗಜರಾದ ಗಂಗಾವತಿಯ ಪ್ರಾಣೇಶ್, ಬಸವರಾಜ ಮಹಾಮನಿ, ನರಸಿಂಹ ಜೋಷಿ, ಅನಿಲ ವೈದ್ಯ ಉಪಸ್ಥಿತರಿದ್ದರು. ಇಂದುಜಾ ಹಿರೇಮಠ ಮತ್ತು ಸಂಗಡಿಗರು ಪ್ರಾರ್ಥಿಸಿದರು.ಸುರೇಶ ಹಳ್ಳಿಕೇರಿ ಸ್ವಾಗತಿಸಿದರು. ಎಸ್.ಸಿ. ಗುಳಗಣ್ಣವರ ನಿರೂಪಿಸಿದರು. ಎಂ.ಎಸ್. ದಢೇಸೂರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಮರಣ ಸಂಚಿಕೆಯ ಸಂಪಾದಕ ಡಾ. ಕಲ್ಲಯ್ಯ ಹಿರೇಮಠ ಸಭೆಯನ್ನುದ್ದೇಶಿ ಮಾತನಾಡಿದರು. ಭಾರತಿ ಶಿರ್ಸಿ ವಂದಿಸಿದರು.

# ವಕೀಲರ ರಕ್ಷಣಾ ಕಾಯ್ದೆ ಜಾರಿಯಾಗಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಇತ್ತೀಚಿನ ದಿನಗಳಲ್ಲಿ ಜನತೆಗೆ ನ್ಯಾಯ ಕಲ್ಪಿಸುವ ಕರ್ತವ್ಯದಲ್ಲಿರುವ ವಕೀಲರ ಮೇಲೆ ಹಲ್ಲೆಗಳು ನಡೆಯುತ್ತಿದ್ದು, ವಕೀಲರು ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಲು ವಕೀಲರ ರಕ್ಷಣಾ ಕಾಯ್ದೆ ಜಾರಿಯಾಗಬೇಕೆಂದು ಲಕ್ಷ್ಮೇಶ್ವರ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಬಾಳೇಶ್ವರಮಠ ಹೇಳಿದರು.

ಕಲಬುರ್ಗಿಯಲ್ಲಿ ವಕೀಲರ ಹತ್ಯೆ, ಚಿಕ್ಕಮಂಗಳೂರಿನ ವಕೀಲರ ಮೇಲೆ ಹಲ್ಲೆ ಮಾಡಿರುವ ಆರೋಪಿತರಿಗೆ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಹಾಗೂ ಕರ್ನಾಟಕ ರಾಜ್ಯದಲ್ಲಿ ವಕೀಲರ ರಕ್ಷಣಾ ಕಾಯ್ದೆ ಕಾನೂನು ಜಾರಿಗೆ ತರುವಂತೆ ಆಗ್ರಹಿಸಿ ವಕೀಲರ ಸಂಘದಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಿದ ವೇಳೆ ಅವರು ಮಾತನಾಡಿದರು.

ವಕೀಲರ ಮೇಲೆ ಹಲ್ಲೆ, ದೌರ್ಜನ್ಯ, ಕೊಲೆ, ಬೆದರಿಕೆಯ ಘಟನೆಗಳು ನಡೆಯುತ್ತಿರುವುದರಿಂದ ವಕೀಲರ ಆತ್ಮಸ್ಥೈರ್ಯಕ್ಕೆ ಧಕ್ಕೆಯಾಗಿದೆ. ಅಂತಹ ಆರೋಪಿತರಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಪದೇ ಪದೇ ಇಂತಹ ಘಟನೆಗಳು ನಡೆಯದಂತೆ ತಡೆಯಲು ವಕೀಲರ ರಕ್ಷಣಾ ಕಾಯ್ದೆ ಜಾರಿಗೆ ತರುವುದು ಅವಶ್ಯವಿದೆ. ಇಂತಹ ಘಟನೆಯನ್ನು ಸರಕಾರ ಗಂಭೀರವಾಗಿ ಪರಿಗಣಿಸಿ ವಕೀಲರಿಗೆ ಸೂಕ್ತ ರಕ್ಷಣೆ ಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಬಿ.ಬಿ. ಭುವನಗೌಡ್ರ, ಆರ್.ಎಸ್. ಮುದಗಲ್, ಜೆ.ಡಿ. ದೊಡ್ಡಮನಿ, ಬಿ.ಎಸ್. ಘೋಂಗಡಿ, ಬಿ.ಎಸ್. ಪಾಟೀಲ, ಎನ್.ಎಂ. ಗದಗ, ಆರ್.ಸಿ. ಪಾಟೀಲ, ಎನ್.ಐ. ಸೊರಟೂರ, ಮಹೇಶ ಹಾರೋಗೇರಿ, ಎಸ್.ಡಿ. ಕಮತದ, ಐ.ಜಿ. ಹುಲಬಜಾರ, ವಿ.ಎಸ್. ಪಶುಪತಿಹಾಳ, ಎಂ.ಎಂ. ಹಾರೋಗೇರಿ, ಎಸ್.ಆರ್. ಅತ್ತಿಗೇರಿ, ಎನ್.ಎಂ. ಗದಗ, ಬಿ.ವಿ. ನೇಕಾರ, ವಿ.ಎಮ್. ಹುಡೇದಮನಿ, ರೇಷ್ಮಾಬಾನು ಕುರಿ, ಅನಂತ ಕಟ್ಟಿಮನಿ, ಮಾಲಸೂರೆ, ಉಮಾ ಬಳ್ಳಾರಿ, ಕಮಲಾ ನಾಯಕ ಮುಂತಾದವರಿದ್ದರು. ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು.

# ಹಿರೇಮಠದ ಜಾತ್ರಾ ಮಹೋತ್ಸವ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಹಿರೇಮಠದ 2023ರ ಜಾತ್ರಾ ಮಹೋತ್ಸವವು ಸೋಮವಾರ ಸಂಪನ್ನಗೊಂಡಿತು. ಧರ್ಮ ಗ್ರಂಥಗಳ ಉತ್ಸವ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹಾಯ್ದು ಮರಳಿ ಹಿರೇಮಠಕ್ಕೆ ಬಂದು ಸೇರಿತು. ಮೆರವಣಿಗೆಯ ಸಂದರ್ಭದಲ್ಲಿ ಸಾಂಪ್ರದಾಯಕ ವಾದ್ಯಗಳಾದ ಡೊಳ್ಳು, ಕರಡಿ ಮಜಲು, ಪುರವಂತರ ಒಡಪುಗಳು ಮೆರವಣಿಗೆಗೆ ಹೊಸ ಮೆರುಗನ್ನು ತುಂಬಿದ್ದವು.


ಮೆರವಣಿಗೆ ಮರಳಿ ಶ್ರೀಮಠಕ್ಕೆ ಬಂದು ತಲುಪಿದ ನಂತರ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳವರು ಆಶೀರ್ವಚನ ನೀಡಿ, ಧರ್ಮದಿಂದ ಮುನ್ನಡೆದಾಗಲೇ ವಿಶ್ವಕ್ಕೆ ಶಾಂತಿ ಎಂಬುದನ್ನು ಯಾರೂ ಮರೆಯಬಾರದು. ಧರ್ಮ ಗ್ರಂಥಗಳು ಮನುಷ್ಯನ ಜೀವನ ಹೇಗಿರಬೇಕು ಎಂಬುದನ್ನು ತಿಳಿಸಿಕೊಂಡುತ್ತವೆ. ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಖ್ಯಾತ ವಾಗ್ಮಿ ಡಾ. ವಿಜಯಲಕ್ಷ್ಮಿ ಬಾಳೇಕುಂದ್ರಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಇನ್ನಿತರ ಗಣ್ಯರು ಬಂದು ನಿಮಗೆಲ್ಲ ಅನೇಕ ಮಹತ್ತರವಾದ ಮಾಹಿತಿಗಳನ್ನು ನೀಡಿದ್ದಾರೆ. ಮಹಾ ಸಾಧ್ವಿ ಶಿರೋಮಣಿ ಹೇಮರೆಡ್ಡಿ ಮಲ್ಲಮಾಂಬೆಯ ಪುರಾಣವನ್ನು, ವಿವಿಧ ಗಣ್ಯರಿಂದ ಸಿದ್ಧಾಂತ ಶಿಖಾಮಣಿ ಪ್ರವಚನವನ್ನು ಕೇಳಿ ಪುನೀತರಾಗಿದ್ದೀರಿ. ಭಗವಂತ ನಿಮಗೆಲ್ಲ ಒಳ್ಳೆಯದನ್ನುಂಟು ಮಾಡಲಿ ಎಂದು ಆಶೀರ್ವದಿಸಿದರು.

ಮಹಾ ಪ್ರಸಾದದ ವಿತರಣೆಯೊಂದಿಗೆ 11 ದಿನಗಳ ಜಾತ್ರಾ ಮಹೋತ್ಸವವು ತೆರೆ ಕಂಡಿತು.

ನಗರಾಭಿವೃದ್ಧಿ ಸಚಿವ ಸುರೇಶ ಬಿ.ಎಸ್. ಭರವಸೆ

# ಧಾರವಾಡ ಪ್ರತ್ಯೇಕ ಮಹಾನಗರ ಪಾಲಿಕೆ ರಚನೆಗೆ ಶೀಘ್ರದಲ್ಲಿ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ



ಹುಬ್ಬಳ್ಳಿ–ಧಾರವಾಡ ಪಶ್ಚಿಮ ವಿಧಾನಸಭಾ ಮತಕ್ಷೇತ್ರದ ಶಾಸಕರಾದ ಅರವಿಂದ ಬೆಲ್ಲದ ಅವರು, ಮಂಗಳವಾರ ಸಂಜೆ ವಿಧಾನಸಭೆಯಲ್ಲಿ ಗಮನ ಸೆಳೆಯುವ ಪ್ರಶ್ನೆ ಕೇಳಿ, ಧಾರವಾಡ ಮಹಾನಗರ ಪಾಲಿಕೆ ರಚನೆಗಾಗಿ ಅಗತ್ಯವಿರುವ ಎಲ್ಲಾ ಮಾನದಂಡಗಳು ಪೂರ್ಣವಾಗಿದ್ದು, ಮಹಾನಗರ ಪಾಲಿಕೆ ರಚನೆಗೆ ಕ್ರಮವಹಿಸಿ ಆದೇಶ ಹೊರಡಿಸಬೇಕೆಂದು ನಗರಾಭಿವೃದ್ಧಿ ಸಚಿವರಲ್ಲಿ ಗಮನ ಸೆಳೆದರು.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯು ನಮ್ಮ ರಾಜ್ಯದ ಎರಡನೇ ಅತೀ ದೊಡ್ಡ ಮಹಾನಗರ ಪಾಲಿಕೆಯಾಗಿದೆ. ಹುಬ್ಬಳ್ಳಿ–ಧಾರವಾಡವು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿರುವ ಪ್ರದೇಶವಾಗಿದೆ. ಸಮೀಪದ ಅನೇಕ ಹಳ್ಳಿಗಳು ಪಾಲಿಕೆಗೆ ಹತ್ತಿರದಲ್ಲಿವೆ. ಜನಸಂಖ್ಯೆಯು ಹೆಚ್ಚಿನ ಪ್ರಮಾಣದಲ್ಲಿದ್ದು, ಈ ಪ್ರದೇಶದಲ್ಲಿ ಕೈಗಾರಿಕೆ, ವಸತಿ ಹಾಗೂ ಶೈಕ್ಷಣಿಕ ಕ್ಷೇತ್ರದ ಎಲ್ಲಾ ಕ್ಷೇತ್ರಗಳು ಬೃದಾಕಾರವಾಗಿ ಬೆಳೆದಿವೆ ಎಂದು ಶಾಸಕ ಬೆಲ್ಲದ ತಿಳಿಸಿದರು.

ಸಾರ್ವಜನಿಕರ ಸಮಸ್ಯೆಗಳು ಶೀಘ್ರವಾಗಿ ಇತ್ಯರ್ಥವಾಗುತ್ತಿಲ್ಲ ಹಾಗೂ ಹಲವಾರು ಸಂಘಟನೆಗಳು ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ಸ್ಥಾಪಿಸಬೇಕೆಂದು ಅಭಿಪ್ರಾಯಿಸಿವೆ. ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಧಾರವಾಡದ ಜನರ ಸರ್ವತೋಮುಖ ಅಭಿವೃದ್ಧಿ ಹಿತದೃಷ್ಟಿಯಿಂದ ಧಾರವಾಡ ಪ್ರತ್ಯೇಕ ಮಹಾನಗರ ಪಾಲಿಕೆಯನ್ನು ಸ್ಥಾಪಿಸುವಂತೆ ಶಾಸಕ ಅರವಿಂದ ಬೆಲ್ಲದ ಅವರು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರ ಗಮನ ಸೆಳೆದರು.

ಈ ಸಂದರ್ಭದಲ್ಲಿ ಉತ್ತರಿಸಿದ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಸುರೇಶ ಬಿ.ಎಸ್. ಅವರು ಮಾತನಾಡಿ, ಹುಬ್ಬಳ್ಳಿ–ಧಾರವಾಡ ನಗರಗಳು ಅವಳಿ ನಗರವಾಗಿ ಗುರಿತಿಸಲ್ಪಟ್ಟಿದ್ದು, ಜಂಟಿಯಾಗಿ ಹುಬ್ಬಳ್ಳಿ–ಧಾರವಾಡ ಮಹಾನಗರಪಾಲಿಕೆಯಾಗಿ ಈಗಾಗಲೇ ಗುರುತಿಸಲ್ಪಟ್ಟಿವೆ. ಈ ಮಹಾನಗರ ಪಾಲಿಕೆಯು 202.3 ಚದರ ಕಿ.ಮೀ. ವಿಸ್ತೀರ್ಣವನ್ನು ಹೊಂದಿದ್ದು, 2011ರ ಜನಗಣತಿಯನ್ವಯ 9,43,788 ಜನಸಂಖ್ಯೆ ಹೊಂದಿದೆ ಹಾಗೂ ಇಲ್ಲಿನ ಜನಸಾಂದ್ರತೆಯನ್ನು ಪ್ರತಿ ಚದರ ಕಿ.ಮೀ.ಗೆ 4,665 ಆಗಿದೆ.

ಒಂದು ನಗರ ಸ್ಥಳೀಯ ಸಂಸ್ಥೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು 2011ರ ಜನಸಂಖ್ಯೆಯು ಮಾನದಂಡವಾಗಿದ್ದು, ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರಲ್ಲಿರುವ ಮಾನದಂಡಗಳನ್ನು ಪೂರೈಸುತ್ತಿರುವ ಬಗ್ಗೆ ಪರಿಶೀಲಿಸಿ, ಧಾರವಾಡ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತಿದೆ ಎಂದು ಹೇಳಿದರು.

ಮಹಾನಗರ ಪಾಲಿಕೆ ರಚನೆಗೆ ಅರ್ಹತೆ: ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ನಿಯಮ–3ರಲ್ಲಿ ತಿಳಿಸಿರುವಂತೆ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವ ಪ್ರದೇಶದ ಜನಸಂಖ್ಯೆ 3 ಲಕ್ಷಕ್ಕಿಂತ ಕಡಿಮೆ ಇರಬಾರದು. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದರ ಕಿ.ಮೀ. ವಿಸ್ತೀರ್ಣಕ್ಕೆ 3,000 ಕ್ಕಿಂತ ಕಡಿಮೆ ಇರಬಾರದು. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯುಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ರೂ. 6.00 ಕೋಟಿ ಅಥವಾ ವಾರ್ಷಿಕ ತಲಾ ಒಬ್ಬರಿಗೆ ರೂ. 200 ಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರಬಾರದು ಮತ್ತು ಅಂತಹ ಪ್ರದೇಶದಲ್ಲಿನ ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣದಲ್ಲಿ ಶೇ. 50 ಕ್ಕಿಂತ ಕಡಿಮೆಯಿಲ್ಲದಿರುವುದನ್ನು ಪರಿಗಣಿಸಲಾಗುತ್ತದೆ.

ಈ ಎಲ್ಲಾ ಮಾನದಂಡಗಳನ್ನು ಪೂರೈಸುತ್ತಿರುವ ಧಾರವಾಡ ನಗರಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆಯನ್ನು ರಚಿಸಲು ಕ್ರಮಕೈಗೊಳ್ಳಲಾಗುವುದೆಂದು ನಗರಾಭಿವೃದ್ಧಿ ಸಚಿವ ಸುರೇಶ ಬಿ.ಎಸ್. ಅವರು ತಿಳಿಸಿದರು.

ಧಾರವಾಡ ಜಿಲ್ಲಾಧಿಕಾರಿಗಳು ಧಾರವಾಡ ನಗರವನ್ನು ಮಾತ್ರ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವುದು ಸೂಕ್ತವೆಂದು ಗುರುತಿಸಿ, ಈ ಕುರಿತಂತೆ ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಿಗೆ ಸಲ್ಲಿಸಿದ್ದಲ್ಲಿ ಮತ್ತು ಪೌರಾಡಳಿತ ನಿರ್ದೇಶಕರಿಂದ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರನ್ವಯ ಸೂಕ್ತ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾದಲ್ಲಿ ನಿಯಮಾನುಸಾರ ಅರ್ಹತೆಯನ್ನು ಪರಿಶೀಲಿಸಿ ಕ್ರಮವಹಿಸಲಾಗುತ್ತದೆ ಎಂದು ನಗರಾಭಿವೃದ್ಧಿ ಸಚಿವರು ಸದನದಲ್ಲಿ ತಿಳಿಸಿದರು.

# ಸ್ಪಷ್ಟ ದಿಕ್ಸೂಚಿಯೊಂದಿಗೆ ಮಹಾನ್ ಕರ್ನಾಟಕ, ಮಹಾನ್ ಭಾರತ ನಿರ್ಮಾಣವಾಗಲಿ

▶▶ ಮೊದಲನೇ ಪುಟದಿಂದ

ಸನ್ಮಾನ ಸ್ವೀಕರಿಸಿದ ಮಾಜಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಪ್ರಜಾತಾಂತ್ರಿಕ ವ್ಯವಸ್ಥೆಯು ವಿವಿಧ ಕಾಲಘಟ್ಟಗಳಲ್ಲಿ ರೂಪುಗೊಂಡು, ಗಟ್ಟಿಗೊಳ್ಳುತ್ತ ಸಾಗಿದೆ. ಪ್ರತಿಯೊಬ್ಬ ಸಂಸದೀಯ ಪಟುಗಳೂ ಇದಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ.

1956ರಲ್ಲಿ ವಿಶಾಲ ಮೈಸೂರು ಪ್ರಾಂತ್ಯ ಅಸ್ತಿತ್ವಕ್ಕೆ ಬಂತು. 1973ರಲ್ಲಿ ಅಂದಿನ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ರಾಜ್ಯ-ಕ್ಕೆ 'ಕರ್ನಾಟಕ' ಎಂದು ನಾಮಕರಣ ಮಾಡಿದ್ದು ಸ್ಮರಣೀಯ ಎಂದರು.

ಮಾಜಿ ಸಭಾಪತಿ ಬಿ.ಎಲ್. ಶಂಕರ್ ಮಾತನಾಡಿ, ರಾಷ್ಟ್ರಕ್ಕೆ ಕರ್ನಾಟಕ ಏಕೀಕರಣದ ಸ್ಪಷ್ಟ ಸಂದೇಶವನ್ನು ಬೆಳಗಾವಿಯ ಸುವರ್ಣಸೌಧದ ಮೂಲಕ ನೀಡುತ್ತಿರುವುದು ಸ್ವಾಗತಾರ್ಹ. ಕರ್ನಾಟಕ ಏಕೀಕರಣ ಹಾಗೂ ಕರ್ನಾಟಕ ನಾಮಕರಣದ ಸಂದರ್ಭದ ಐತಿಹಾಸಿಕ ಕಾರಣಗಳನ್ನು ನಾವೆಲ್ಲ ಮನನ ಮಾಡಿಕೊಳ್ಳಬೇಕು. ಬೆಳಗಾವಿಯ ಸುವರ್ಣಸೌಧದಲ್ಲಿ ಸರ್ಕಾರದ ಚಟುವಟಿಕೆಗಳು ಹೆಚ್ಚಾಗಬೇಕು. ತಿಂಗಳಿಗೆ ಕನಿಷ್ಠ ಒಂದು ಸಚಿವ ಸಂಪುಟ ಸಭೆಯನ್ನಾದರೂ ಇಲ್ಲಿ ಆಯೋಜಿಸಬೇಕು ಎಂದು ಸಲಹೆ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿದರು. ವಿಧಾನಸಭೆಯ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ವಿ.ಪ ಉಪಸಭಾಪತಿ ಎಂ.ಕೆ. ಪ್ರಾಣೇಶ, ಸರಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಡಾ.ಜಿ. ಪರಮೇಶ್ವರ, ಕೆ.ಹೆಚ್. ಮುನಿಯಪ್ಪ, ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮತ್ತಿತರ ಗಣ್ಯರು ವೇದಿಕೆಯಲ್ಲಿದ್ದರು.

ಸಭಾ ಕಾರ್ಯಕ್ರಮದ ನಂತರ ಮೂಡಬಿದಿರೆಯ ಆಳ್ವಾಸ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

### ಶ್ರೀ ದ್ಯಾಮವ್ವ ದೇವಿ ಕಳಸಾರೋಹಣ, ಜಾತ್ರಾ ಮಹೋತ್ಸವದ ಉದ್ಘಾಟನಾ ಸಮಾರಂಭ

# ಬುದ್ಧಿಯನ್ನು ಸತ್ಕಾರ್ಯಗಳತ್ತ ಕೇಂದ್ರೀಕರಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗ್ರಾಮ ದೇವತೆಯು ಆಯಾ ಗ್ರಾಮಗಳಲ್ಲಿ ವಾಸಿಸುವ ಎಲ್ಲ ಜನರರನ್ನೂ ಕಾಪಾಡಿ ಸಲಹುವ ಅಧಿದೇವತೆಯಾಗಿದ್ದಾಳೆ. ಅವಳ ಆರಾಧನೆಯಿಂದ ಎಲ್ಲರೂ ಶಾಂತಿ, ನೆಮ್ಮದಿಯಿಂದ ಬದುಕಲು ಸಾಧ್ಯವಿದೆ ಎಂದು ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ನರೇಗಲ್ಲದ ಶ್ರೀ ದ್ಯಾಮವ್ವ ದೇವಿ ಕಳಸಾರೋಹಣ ಮತ್ತು ಜಾತ್ರಾ ಮಹೋತ್ಸವದ ಉದ್ಘಾಟನಾ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನಾವು ಪಡೆದು ಬಂದಿರುವ ಈ ದೇಹವೇ ಒಂದು ಗ್ರಾಮವಾಗಿದೆ. ಇದರಲ್ಲಿ ಮೂಲಾಧಾರ ಚಕ್ರವಿದೆ. ಇದರಿಂದ ಹೊರಡುವ ಓಂಕಾರ ನಾದವು ಜಗತ್ತಿನ ಎಲ್ಲ ಸೃಷ್ಟಿಗೆ ಮೂಲ ಆಧಾರವಾಗಿದೆ. ಇದನ್ನು ಸರಿಯಾಗಿ ತಿಳಿದುಕೊಳ್ಳುವುದರ ಜೊತೆ-ಗೆ, ಇದನ್ನು ಸಂರಕ್ಷಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ ಎಂದು ಶ್ರೀಗಳು ತಿಳಿಸಿದರು.

ಮಾನವನ ಈ ಶರೀರಕ್ಕೆ ತನು, ಕಾಯ, ಭೋಗಾಯತನ, ಅಂಗ, ಶರೀರ, ಅದ್ಭುತ, ಎಂಬಿತ್ಯಾದಿ ಹೆಸರುಗಳಿವೆ. ಅತ್ಯಂತ ಬೆಲೆಬಾಳುವ ದೇಹವನ್ನು ಭಗವಂತನಿಂದ ಪಡೆದು ಬಂದಿರುವ ನಾವು ಅನೇಕ ದುಶ್ಚಟಗಳಿಗೆ ಬಲಿಯಾಗಿ ಹಾಳು ಮಾಡಿಕೊಳ್ಳುತ್ತಿದ್ದೇವೆ. ಆದ್ದರಿಂದ ಈ ದುಶ್ಚಟಗಳನ್ನು ಮೊದಲು ತ್ಯಜಿಸಬೇಕು. ಮನುಷ್ಯ ತನ್ನ ನಡವಳಿಕೆ ಮತ್ತು ಕಾರ್ಯಗಳಿಂದ ದೊಡ್ಡವ-ಸಣ್ಣವ ಎನಿಸಿಕೊಳ್ಳುತ್ತಾನೆ. ಆದ್ದರಿಂದ ಎಂದಿಗೂ ಒಳ್ಳೆಯ ಕಾರ್ಯಗಳನ್ನು ಮಾಡುವತ್ತ ಮನಸ್ಸು ಮಾಡಬೇಕೆಂದು ಶ್ರೀಗಳು ಹಿತವಚನ ನುಡಿದರು.

ಸಮಾರಂಭದ ನೇತೃತ್ವ ವಹಿಸಿದ್ದ ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಮಹಾಸ್ವಾಮಿಗಳವರು ಆಶೀರ್ವಚನ ನೀಡಿ, ಜಗನ್ಮಾತೆಯನ್ನು ಪೂಜಿಸುವದರಿಂದ ಎಲ್ಲರ ಬಾಳಿನಲ್ಲಿ ಶಾಂತಿ-ನೆಮ್ಮದಿ ನೆಲೆಸುತ್ತದೆ. ಕಾಲಕಾಲಕ್ಕೆ ಉತ್ತಮ ಮಳೆ ಬೆಳೆ ಸಾಧ್ಯವಾಗುತ್ತದೆ. ದೇವಿಯ ಮಹಾತ್ಮೆಯು ಅಪಾರವಾಗಿದ್ದು, ಅದನ್ನು ತಿಳಿಯುವ ಕಾರ್ಯ ಎಲ್ಲರಿಂದಲೂ ಆಗಬೇಕು. ಈ ಜಾತ್ರಾ ಮಹೋತ್ಸವದ ಮೂಲಕ ನಿಮ್ಮೆಲ್ಲರ ಬಾಳಿನಲ್ಲಿ ಸುಖ, ಸಮೃದ್ಧಿಗಳು ನೆಲೆಸಲಿ ಎಂದು ಆಶೀರ್ವದಿಸಿದರು.




ಸಮಾರಂಭವನ್ನು ಉದ್ಘಾಟಿಸಿದ ಮುಖಂಡ ಮಿಥುನ ಪಾಟೀಲ ಮಾತನಾಡಿ, ನರೇಗಲ್ಲ ಪಟ್ಟಣ ಕೇವಲ ವಿದ್ಯಾ ಕಾಶಿಯಷ್ಟೇ ಅಲ್ಲದೆ ಇಲ್ಲಿ ಅನೇಕ ಆಧ್ಯಾತ್ಮಿಕ, ಸಾಹಿತ್ತಿಕ ಸಮಾರಂಭಗಳು ಮೇಲಿಂದ ಮೇಲೆ ನಡೆಯುತ್ತಿವೆ. ಇದರಿಂದ ಗ್ರಾಮದಲ್ಲಿ ಶಾಂತಿ ನೆಲೆಸಿ, ಗ್ರಾಮವು ಸಾಂಸ್ಕೃತಿಕವಾಗಿ ಶ್ರೀಮಂತಗೊಳ್ಳುತ್ತದೆ ಎಂದರು.

ವೇದಿಕೆಯ ಮೇಲೆ ದರಗಾದ ಶರಣರಾದ ಮಂಜೂರ ಹುಸೇನ್ ಶ್ಯಾವಲಿಯವರು ಉಪಸ್ಥಿತರಿದ್ದರು. ಕಳಸಾರೋಹಣ ಸಮಿತಿಯ ಅಧ್ಯಕ್ಷ ಬಾಳಪ್ಪ ಸೋಮಗೊಂಡ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ಸುರೇಶ ಹಳ್ಳಿಕೇರಿ ನಿರೂಪಿಸಿದರು. ಪತ್ರಕರ್ತ ಆದರ್ಶ ಕುಲಕರ್ಣಿ ಸ್ವಾಗತಿಸಿದರು. ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಾ ಲಕ್ಕನಗೌಡ್ರ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಶಿವಯೋಗಿ ಜಕ್ಕಲಿ ವಂದಿಸಿದರು.

### ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದಿಂದ 'ಹರಮನೆ' ಕಾರ್ಯಕ್ರಮ

# ಸೌಹಾರ್ದತೆಯ ಬದುಕು ಎಲ್ಲರದಾಗಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಾತಿ-ಧರ್ಮಕ್ಕಿಂತ ನೀತಿ ಮತ್ತು ಬದುಕುವ ರೀತಿ ಮುಖ್ಯವಾಗಿದ್ದು, ಮಾನವೀಯ ಮೌಲ್ಯಗಳೊಂದಿಗೆ ಎಲ್ಲರೊಳಗೊಂದಾಗಿ ಬದುಕಿದಾಗ ಮಾತ್ರ ಮಾನವ ಜನ್ಮ ಸಾರ್ಥಕತೆ ಹೊಂದುತ್ತದೆ ಎಂದು ಲಕ್ಷ್ಮೇಶ್ವರ ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಹೇಳಿದರು.

ಅವರು ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಸೋಮವಾರ ಪಟ್ಟಣದ ಅಂಬೇಡ್ಕರ ನಗರದ ಹನಮಂತಪ್ಪ ನೀಲಪ್ಪ ನಂದೆಣ್ಣವರ ಅವರ ಮನೆಯಲ್ಲಿ ಹಮ್ಮಿಕೊಳ್ಳಲಾಗಿದ್ದ 'ಹರಮನೆ' ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿಯೊಬ್ಬರೂ ತಮ್ಮ ಜೀವನದ ಶ್ರೇಷ್ಠತೆ, ಸಾರ್ಥಕತೆಗಾಗಿ ಜಾತಿ, ಧರ್ಮದ ಕಟ್ಟಳೆ ಬದಿಗೊತ್ತಿ ಪರಸ್ಪರ ಸ್ನೇಹ, ಪ್ರೀತಿ, ಸೌಹಾರ್ದತೆಯ ಬದುಕು ಕಟ್ಟಿಕೊಳ್ಳಬೇಕು. ಸಂತರು, ಶರಣರು, ದಾಸವರೇಣ್ಯರು, ಮಹಾತ್ಮಾ ಗಾಂಧಿ, ಬುದ್ಧ, ಬಸವ, ಅಂಬೇಡ್ಕರ ಅವರು ಈ ನೆಲದಲ್ಲಿ ಸಮಾನತೆ, ಮಾನವೀಯತೆ, ಸ್ನೇಹ-ಪ್ರೀತಿ ಬಿತ್ತುವ ಕಾರ್ಯ ಮಾಡಿದ್ದಾರೆ. ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆದರೆ ಉತ್ತಮ ಸಮಾಜ ನಿರ್ಮಾಣವಾಗುತ್ತದೆ. ಈ ನಿಟ್ಟಿನಲ್ಲಿ ಪಂಚಮಸಾಲಿ ಸಮಾಜದಿಂಜ ಸಾಮರಸ್ಯದ ಬದುಕಿಗಾಗಿ ಹರಮನೆ ಎನ್ನುವ ವಿಶಿಷ್ಟ ಕಾರ್ಯಕ್ರಮವನ್ನು ಎಲ್ಲ ಸಮಾಜದ ಮನೆಗಳಲ್ಲಿ ಆಯೋಜಿಸಲಾಗುತ್ತಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಹನಮಂತಪ್ಪ ನಂದೆಣ್ಣವರ, ಪಂಚಮಸಾಲಿ ಸಮಾಜದವರು ಹರಮನೆ ಕಾರ್ಯಕ್ರಮದ ಮೂಲಕ ಎಲ್ಲ ಸಮಾಜದ ಮನೆ-ಮನಗಳಲ್ಲಿ ಸ್ನೇಹ-ಪ್ರೀತಿ, ಸಹೋಜರತ್ವ, ಬಾಂಧವ್ಯ, ಸಮಾನತೆ ಬೆಸೆಯುವ ಶ್ರೇಷ್ಠ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ಈ ಕಾರ್ಯ ನಿರಂತರವಾಗಿ ನಡೆಯಲಿ ಎಂದರು. ನಾಗರಾಜ ಪೂಜಾರ ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬದುಕು-ಬರಹ, ಜೀವನ ವೃತ್ತಾಂತದ ಕುರಿತು ಉಪನ್ಯಾಸ ನೀಡಿದರು.

ಎಸ್.ಎಫ್. ಆದಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಾಹಿತಿ ಪಿ.ಬಿ. ಕರಾಟೆ, ಶಿವನಗೌಡ್ರ ಅಡರಕಟ್ಟಿ, ಬಸವಣೆಣ್ಣೆಪ್ಪ ನಂದೆಣ್ಣವರ, ಶೇಖಣ್ಣ ಕಾಳೆ, ಫಕ್ಕಿರೇಶ ಅಣ್ಣಿಗೇರಿ, ವೀರೇಂದ್ರ ಕಟಗಿ, ಶಂಕರ ಬ್ಯಾಡಗಿ, ಫಕೀರೇಶ ನಂದೆಣ್ಣವರ, ಮಲ್ಲಣ್ಣ ಬಾಳಿಕಾಯಿ, ನಾಗರಾಜ ಕಳಸಾಪುರ, ಸೋಮಶೇಖರ ಕೆರಿಮನಿ, ಬಸವರಾಜ ಗೋಡಿ, ರಾಜು ಲಿಂಬಿಕಾಯಿ, ಮಂಜುನಾಥ ಮುಳಗುಂದ, ಪ್ರವೀಣ ಹೊಟ್ಟಿ ಮಾಂತೇಶ ಗೋಡಿ, ನವೀನ ಕುಂಬಾರ, ಅಭಯ್ ಜೈನ್, ರಾಘವೇಂದ್ರ ನಂದೆಣ್ಣವರ, ಶರಣಪ್ಪ ನಂದೆಣ್ಣವರ ಸೇರಿ ಅನೇಕರಿದ್ದರು. ಜಯಪ್ರಕಾಶ ಹೊಟ್ಟಿ, ಸೋಮಣ್ಣ ಯತ್ತಿನಹಳ್ಳಿ, ಚಂದ್ರು ಮಾಗಡಿ ನಿರ್ವಹಿಸಿದರು.

# 370 ಕಾಯ್ದೆ ರದ್ದತಿ ಎತ್ತಿ ಹಿಡಿದ ಸುಪ್ರೀಂ ಕೋರ್ಟ್: ಅರ್ಜಿದಾರರಿಗೆ ಮುಖಭಂಗ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಅವಿಭಾಜ್ಯ ಅಂಗವಾಗಿರುವ ಜಮ್ಮು ಮತ್ತು ಕಾಶ್ಮೀರಕ್ಕೆ ಈ ಹಿಂದೆ ಆರ್ಟಿಕಲ್ 370 ಕಾಯ್ದೆ ಹೇರಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿ ಅವರು 2019ರಲ್ಲಿ ಈ ಕಾಯ್ದೆಯನ್ನು ರದ್ದುಪಡಿಸಿ ಭಾರತದ ಇತರೆ ರಾಜ್ಯಗಳಿಗೆ ಸಿಗುವ ಸೌಲಭ್ಯಗಳು ಜಮ್ಮು ಮತ್ತು ಕಾಶ್ಮೀರಕ್ಕೆ ಸಿಗುವಂತೆ ಮಾಡಿದ್ದು ಐತಿಹಾಸಿಕ ದಿನ. ಆದರೆ, ಕೆಲವು ದುಷ್ಟ ಶಕ್ತಿಗಳನ್ನು ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದವು. ಈಗ ಸುಪ್ರೀಂಕೋರ್ಟ್ ಕೇಂದ್ರ ಸರ್ಕಾರದ ತೀರ್ಪನ್ನು ಎತ್ತಿ ಹಿಡಿದಿರುವುದು ಅರ್ಜಿದಾರರಿಗೆ ಭಾರೀ ಮುಖಭಂಗವಾಗಿದೆ ಎಂದು ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಅವರು, ಸರ್ಕಾರದ ಆದೇಶವನ್ನು ನಾವು ಪ್ರಶ್ನೆ ಮಾಡಲು ಸಾಧ್ಯವಿಲ್ಲ. ಸಂಸತ್ ಮತ್ತು ರಾಷ್ಟ್ರಪತಿ ಈ ನಿರ್ಧಾರವನ್ನು ಕೈಗೊಳ್ಳಬಹುದು. ರಾಷ್ಟ್ರಪತಿ ಆಳ್ವಿಕೆ ಜಾರಿಯಲ್ಲಿರುವಾಗ ರಾಷ್ಟ್ರಪತಿಗಳ ಅಧಿಕಾರಕ್ಕೂ ಮಿತಿಗಳು ಇರುತ್ತವೆ್ವರುಕೈಗೊಳ್ಳುವ ನಿರ್ಧಾರಗಳು ನ್ಯಾಯಾಂಗದ ಪರಾಮರ್ಶೆಗೆ ಒಳಪಡಲಿದೆ ಎಂದು ತೀರ್ಪು ನೀಡಿರುವುದು ಸ್ವಾಗತಾರ್ಹ ಎಂದವರು ತಿಳಿಸಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್, ನ್ಯಾಯಮೂರ್ತಿಗಳಾದ ಸಂಜಯ್ ಕೃಷ್ಣ ಕೌಲ್, ಬಿ.ಆರ್. ಗವಾಯಿ ಹಾಗೂ ಸೂರ್ಯಕಾಂತ ಅವರಿದ್ದ ಪೀಠ ಈ ಮಹತ್ವದ ತೀರ್ಪು ನೀಡಿದ್ದು, ರಾಜ್ಯದ ಜನತೆಯ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಯಳವತ್ತಿ ತಿಳಿಸಿದ್ದಾರೆ.

# ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ: ಗೋವಿನ ಜೋಳದ ತೆನೆ ಭಸ್ಮ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಮಂಗಳವಾರ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಒಕ್ಕಲಿಗಾಗಿ ಸಂಗ್ರಹಿಸಿದ್ದ ಗೋವಿನ ಜೋಳದ ತೆನೆ ಸುಟ್ಟು ಕರಕಲಾದ ಘಟನೆ ಜರುಗಿದೆ.

ಶಿಗ್ಲಿ ಗ್ರಾಮದ ಹೊರವಲಯದಲ್ಲಿ ಹತ್ತಾರು ರೈತರು ಒಕ್ಕಲಿಗಾಗಿ ಗೋವಿನಜೋಳದ ತೆನೆ ಸಂಗ್ರಹಿಸಿದ್ದರು. ವಿದ್ಯುತ್ ತಂತಿಗಳ ಸ್ಪರ್ಶದಿಂದ ಹೊತ್ತಿದ ಕಿಡಿ ಗೋವಿನಜೋಳದ ತೆನೆಯ ಮೇಲೆ ಬಿದ್ದು ಬೆಂಕಿ ಹೊತ್ತಿಕೊಂಡಿದೆ. ಬೆಂಕಿಯ ಕೆನ್ನಾಲಿಗೆಗೆ ರೈತ ಬಸವರಾಜ ಬೆಲಗಜ್ಜರಿ ಅವರ 1.5 ಲಕ್ಷ ರೂ, ಫಕ್ಕೀರಪ್ಪ ಗೋಣೆಪ್ಪನವರ ಅವರ 10 ಸಾವಿರ ರೂ, ಮಹಾದೇವಪ್ಪ ಕಳಸೂರ ಅವರಿಗೆ ಸೇರಿದ 10 ಸಾವಿರ ರೂ. ಬೆಲೆಯ ಜೋಳದ ಹೊಟ್ಟು, ತಾಡಪತ್ರಿ ಸುಟ್ಟು ಹಾನಿಯಾಗಿದೆ.

ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದರಿಂದ, ಸಂಭವಿಸಬಹುದಾಗಿದ್ದ ಹೆಚ್ಚಿನ ಹಾನಿ ತಪ್ಪಿದೆ. ಅಗ್ನಿಶಾಮಕ ದಳದ ಎಸ್.ವೈ. ಪಾಟೀಲ, ಬಾಬಣ್ಣ ಲಮಾಣಿ, ಮಂಜುನಾಥ ಹಡಪದ, ಕೃಷ್ಣ ರಾಠೋಡ ಬೆಂಕಿ ನಂದಿಸುವ ಕಾರ್ಯಾಚರಣೆ ಕೈಗೊಂಡರು. ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಘಟನಾ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆ.

### ನರೇಗಲ್ಲ ಬೀಚಿ ಬಳಗದ ದಶಮಾನ ಸಂಭ್ರಮ ಕಾರ್ಯಕ್ರಮದಲ್ಲಿ ಗಂಗಾವತಿ ಪ್ರಾಣೇಶ್ ಅಭಿಮತ

# ಬೀಚಿ ಈ ನಾಡು ಕಂಡ ಅಪರೂಪದ ಸಾಹಿತಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭೀಮಸೇನ ರಾಯಸಂ ಎನ್ನುವ ವ್ಯಕ್ತಿ ಬೀಚಿ ಎಂಬ ಹೆಸರಿನೊಂದಿಗೆ ಈ ನಾಡಿನಲ್ಲಿ ಜನಿಸಿ, ತಮ್ಮ ಸಂದೇಶಗಳನ್ನು ಹಾಸ್ಯದ ಮೂಲಕ ಜನರಿಗೆ ಉಣಬಡಿಸಿದರು. ಅವರ ಹಾಸ್ಯದಲ್ಲಿ ವಿಡಂಬನೆ ಇತ್ತಾದರೂ ಅದರಲ್ಲಿ ಅರ್ಥ ಇರುತ್ತಿತ್ತು. ಹೀಗಾಗಿ ಬೀಚಿ ಕನ್ನಡ ನಾಡಿನ ಅಪರೂಪದ ಸಾಹಿತಿಯಾಗಿದ್ದಾರೆ ಎಂದು ' ಖ್ಯಾತ ಭಾಷಣಕಾರ ಗಂಗಾವತಿ ಪ್ರಾಣೇಶ್ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಜರುಗಿದ ನರೇಗಲ್ಲ ಬೀಚಿ ಬಳಗದ ದಶಮಾನ ಸಂಭ್ರಮ ಕಾರ್ಯಕ್ರಮದಲ್ಲಿ ಅವರು ಬಳಗದ ಹಿಂದಿನ ಅಧ್ಯಕ್ಷರನ್ನು ಸನ್ಮಾನಿಸಿ ಮಾತನಾಡಿದರು.



ಮನುಷ್ಯ ಬೆಳೆದಂತೆ ಅವನ ಆಯುಷ್ಯ ಕಡಿಮೆಯಾಗುತ್ತದೆ. ಆದರೆ ಸಂಘಟನೆಗಳು ಬೆಳೆದಂತೆ ಅವುಗಳ ಆಯುಷ್ಯ ಹೆಚ್ಚಾಗುತ್ತದೆ. ನರೇಗಲ್ಲದ ಈ ಬೀಚಿ ಬಳಗವು ಶತಮಾನೋತ್ಸವವನ್ನು ಆಚರಿಸುವಂತಾಗಬೇಕು.

ಹೀಗಾಗಬೇಕಾದರೆ ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳ ಎಲ್ಲ ಜನತೆ ಈ ಸಂಘಟನೆಯ ಸದಸ್ಯತ್ವ ಪಡೆಯಬೇಕೆಂದು ಪ್ರಾಣೇಶ್ ಹೇಳಿದರು.

ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ, ಭಾಷಣಕಾರರಾದ ಬಸವರಾಜ ಮಹಾಮನಿ ಮತ್ತು ನರಸಿಂಹ ಜೋಷಿಯವರ ಜುಗಲಬಂದಿ ಕಾರ್ಯಕ್ರಮವು ಪ್ರೇಕ್ಷಕರನ್ನು ನಗೆಗಡಲಲ್ಲಿ ತೇಲಿಸಿತು. ಬೀಚಿ ಬಳಗದ ಹಿಂದಿನ ಅಧ್ಯಕ್ಷರಾದ ಡಿ.ಎ. ಅರವಟಗಿಮಠ, ಎಂ.ಎಸ್. ದಢೇಸೂರಮಠ, ಅರುಣ ಬಿ.ಕುಲಕರ್ಣಿ, ಡಾ. ಎಸ್.ಜಿ. ಗುರಿಕಾರ, ಎಸ್.ಸಿ. ಗುಳಗಣ್ಣವರ, ಡಾ. ಆರ್.ಕೆ. ಗಚ್ಚಿನಮಠ, ಸುರೇಶ ಹಳ್ಳಿಕೇರಿ, ಸ್ಮರಣ ಸಂಚಿಕೆಯ ಸಂಪಾದಕ ಡಾ. ಕಲ್ಲಯ್ಯ ಹಿರೇಮಠರನ್ನು ಗಂಗಾವತಿ ಪ್ರಾಣೇಶ್ ಮತ್ತು ಗಣ್ಯರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್, ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ, ಮಿಥುನ ಪಾಟೀಲ, ಗಣ್ಯರಾದ ಡಾ. ಶೇಖರ ಡಿ.ಸಜ್ಜನರ, ಡಾ. ಕೆ.ಬಿ. ಧನ್ನೂರ, ಎಸ್‌ಎವಿವಿಪಿ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಸನ್ಮಾರ್ಗ ಮಹಾವಿದ್ಯಾಲಯದಲ್ಲಿ 'ಸಂವಿಧಾನ ಓದು' ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಸಂವಿಧಾನ ಓದು ಕಾರ್ಯಕ್ರಮ ನೆರವೇರಿತು.

ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧೀಕ್ಷಕ ರಾಜು ಸೊಪ್ಪಡ್ಲ ಮಾತನಾಡಿ, ನಾಳಿನ ನಾಗರಿಕರಾದ ನೀವು ಡಾ. ಅಂಬೇಡ್ಕರ್ ರಚಿಸಿದ ಭಾರತದ ಸಂವಿಧಾನವನ್ನು ಓದಿ, ಅರ್ಥೈಸಿಕೊಳ್ಳಬೇಕು. ಅವರ ಆಶಯದಂತೆ ನೀವೆಲ್ಲರೂ ಸನ್ಮಾರ್ಗದಲ್ಲಿ ಸಾಗಿದಾಗ ಮಾತ್ರ ರಾಷ್ಟ್ರೀಯ ನವನಿರ್ಮಾಣ ಸಾಧ್ಯ ಎಂದರು.

ಇನ್ನೋರ್ವ ಅತಿಥಿ ನವೀನ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಹಿತವಚನ ಹೇಳಿದರು. ಸಂಸ್ಥೆಯ ನಿರ್ದೇಶಕ ಪ್ರೊ.ಉಡುಪಿ ದೇಶಪಾಂಡೆ, ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರಾಚಾರ್ಯ ಪ್ರೇಮಾನಂದ ರೋಣದ, ಉಪನ್ಯಾಸಕ ಡಿ.ಬಿ. ಕುಲಕರ್ಣಿ ಮಾತನಾಡಿದರು.

ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರಮೀಳಾ ಚಿಕ್ಕನಗೌಡರ ಪ್ರಾರ್ಥಿಸಿದರು. ಉಪನ್ಯಾಸಕ ಹೇಮಂತ ದಳವಾಯಿ ಕಾರ್ಯಕ್ರಮ ನಿರೂಪಿಸಿದರು. ಪರಶುರಾಮ್ ಕೊಟ್ನೆಕಲ್ ಅವರು ವಂದಿಸಿದರು.

# ಸುತ್ತೂರು ಮಠದ ಸೇವೆ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಲ್ಲಿನ ಸುತ್ತೂರು ಮಠ ಅನ್ನ, ಅಕ್ಷರ, ಆಶ್ರಯ ನೀಡುವಲ್ಲಿ ಮುಂಚೂಣಿಯಲ್ಲಿದೆ. ಇದರೊಂದಿಗೆ ದೇಶ-ವಿದೇಶಗಳಲ್ಲಿ ಶಾಲಾ-ಕಾಲೇಜುಗಳನ್ನು ತೆರೆದು ಅಕ್ಷರ ಕ್ರಾಂತಿಯ ಮೂಲಕ ಜ್ಞಾನದ ಬೆಳಕನ್ನು ಹರಡುತ್ತಿರುವ ಮೈಸೂರಿನ ಸುತ್ತೂರು ಮಠದ ಸೇವೆ ಸ್ಮರಣೀಯ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ದುಬೈಯಲ್ಲಿ ಮೈಸೂರಿನ ಸುತ್ತೂರು ಮಠದವರು ಸ್ಥಾಪಿಸಿದ ಜೆಎಸ್‌ಎಸ್ ಅಂತಾರಾಷ್ಟ್ರೀಯ ಶಾಲೆಗೆ ಭೇಟಿ ನೀಡಿ, ಬೋಧನಾ ಕೊಠಡಿ, ಪ್ರಯೋಗಾಲಯ



ಕೊಠಡಿ, ಸಾಂಸ್ಕೃತಿಕ ಕೊಠಡಿ, ಸಂಗೀತ ಮತ್ತು ನೃತ್ಯ ಕೊಠಡಿ ಇತ್ಯಾದಿಗಳನ್ನು ವೀಕ್ಷಿಸಿ, ಮಾತನಾಡಿದರು.

ಕರ್ನಾಟಕದಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ತನ್ನದೇ ಆದ ಹಿರಿಮೆ ಹೊಂದಿದೆ. ಸೌಹಾರ್ದತೆಗೆ ಹೆಸರಾದ ಶ್ರೀಮಠ ಶಿಕ್ಷಣ ಕ್ಷೇತ್ರದಲ್ಲಿಯೂ ಕ್ರಾಂತಿಯನ್ನು ಮಾಡುವ ಮೂಲಕ ತನ್ನದೇ ಆದ ಹೆಜ್ಜೆ ಗುರುತುಗಳನ್ನು ದೇಶ-ವಿದೇಶಗಳಲ್ಲಿ ಮೂಡಿಸಿದೆ. ದುಬೈಯಲ್ಲಿ ಸ್ಥಾಪಿಸಿರುವ ಈ ಶಾಲೆ ಇನ್ನೂ ಉತ್ತರೋತ್ತರವಾಗಿ ಬೆಳೆದು ಲಕ್ಷಾಂತರ ಮಕ್ಕಳಿಗೆ ಉತ್ಕೃಷ್ಟ ಮಟ್ಟದ ಜ್ಞಾನಾರ್ಜನೆ ನೀಡುವಂತಾಗಲಿ ಎಂದರು.

ಈ ಸಂದರ್ಭದಲ್ಲಿ ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ಅಧ್ಯಕ್ಷ, ನ್ಯಾಯವಾದಿ ಇಬ್ರಾಹಿಂ ಖಲೀಲ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ್, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಿಕರಾದ ಝಡ್.ಎ. ಖೈಯಾರ, ವಿಜಯಕುಮಾರ ಶೆಟ್ಟಿ, ಗಾಣದಮೂಲೆ, ಮಜೀಬೈಲು, ಎ.ಆರ್. ಸುಬ್ಬಯ್ಯಕಟ್ಟೆ, ನವೀನಗೌಡ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಗೀತೆಯಿಂದ ಶ್ರೀಕೃಷ್ಣನ ಅನುಗ್ರಹ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಗೀತೆಯ ಮುಖೇನ ಶ್ರೀಕೃಷ್ಣನ ಅಂತರಂಗದ ಭಕ್ತರಾಗಿ, ಕೃಷ್ಣನ ಅನುಗ್ರಹದಿಂದ ಸಕಲವೂ ಸಾಧ್ಯವಾಗಲಿದೆ ಎಂದು ಉಡುಪಿ ಪರ್ಯಾಯ ಪೀಠಾಧೀಶರಾದ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರತೀರ್ಥ ಶ್ರೀಪಾದರ ಕಿರಿಯ ಶಿಷ್ಯಂದಿರಾದ ಶ್ರೀ ಸುಶ್ರೀಂದ್ರತೀರ್ಥ ಶ್ರೀಪಾದರು ಅನುಗ್ರಹ ಸಂದೇಶ ನೀಡಿದರು.

ಅವರು ಸೋಮವಾರ ಸಂಜೆ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಹಿರಿಯ ಶ್ರೀಗಳ 4ನೇ ಬಾರಿಯ ಉಡುಪಿಯ ಶ್ರೀಕೃಷ್ಣನ ಪರ್ಯಾಯ ಕುರಿತು ಸಂಚಾರ ಸಂದರ್ಭದಲ್ಲಿ ನೆರೆದ ಭಕ್ತಾಧಿಗಳನ್ನು ಅನುಗ್ರಹಿಸಿ ಮಾತನಾಡಿದರು.

ಇಂದು ವೀರನಾರಾಯಣನ ಸನ್ನಿಧಿಯಲ್ಲಿ ವೀರವಿಠ್ಠಲ ಸಂಗಮವಾಗಿರುವುದು ನಮ್ಮೆಲ್ಲರಿಗೂ ಸಂತಸದ ದಿನವಾಗಿದೆ. ಉಡುಪಿ ಕೃಷ್ಣ ಪರ್ಯಾಯ ಪೂಜಾ ಸೇವಾ ಅವಕಾಶ 4ನೇ ಬಾರಿ ಗುರುಗಳಿಗೆ ಲಭಿಸುತ್ತಿರುವುದು ಸಂತಸದ ವಿಷಯವಾಗಿದೆ. ವಿಶ್ವದಾದ್ಯಂತ ಒಂದು ಕೋಟಿ ಜನರಿಂದ ಗೀತೆಯನ್ನು ಬರೆಸಿ, ಶ್ರೀಕೃಷ್ಣನಿಗೆ ಸಮರ್ಪಿಸುವ ಗುರಿ ಹೊಂದಲಾಗಿದೆ. ಓದು ಮತ್ತು ಅನುಕರಣೆಯಿಂದ ಗೀತೆಯ ಸಾರ ಅರಿಯುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು. ಗೀತೆ ಮತ್ತು ವಿಷ್ಣು ಸಹಸ್ರನಾಮ ಮಹಾಭಾರತದ ಸಾರವಾಗಿದ್ದು, ಅರ್ಜುನನ್ನು ನಿಮಿತ್ತವಾಗಿರಿಸಿಕೊಂಡು ಗೀತೆಯ ಮೂಲಕ ಜಗತ್ತಿಗೆ ದಾರಿ ತೋರಿದ ಕೀರ್ತಿ ಶ್ರೀಕೃಷ್ಣನದ್ದಾಗಿದೆ ಎಂದು ಸಂದೇಶ ನೀಡಿದರು.

ಕಾರ್ಯಕ್ರಮಕ್ಕೂ ಮುನ್ನ ನಗರಕ್ಕೆ ಆಗಮಿಸಿದ ಶ್ರೀಗಳನ್ನು ಶ್ರೀ ವೀರನಾರಾಯಣ ದೇವಸ್ಥಾನದ ರಥಬೀದಿಯಲ್ಲಿ ಶೋಭಾ ಯಾತ್ರೆಯ ಮೂಲಕ ಸ್ವಾಗತಿಸಲಾಯಿತು. ವಿದ್ಯಾನಾಥ ಪ್ರದ್ಯುಮ್ನ ಅವರಿಂದ ವೇದಘೋಷ, ಪಂ. ಶ್ರೀಪಾದಾಚಾರ ಹುನಗುಂದ ಇವರಿಂದ ಪ್ರಾಸ್ತಾವಿಕ ಭಾಷಣ, ಪಂ. ರಘೋತ್ತಮಚಾರ ನಿಲೂಗಲ ಅವರಿಂದ ನಿರೂಪಣೆ ವಿವಿಧ ಸಂಘ-ಸಂಸ್ಥೆಗಳಿಂದ ಗೌರವ ಸಮರ್ಪಣೆ ಜರುಗಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಶ್ರೀಧರಾಚಾರ ಶಿರಹಟ್ಟಿ, ನಾರಾಯಾಣಚಾರ ಗುಡಿ, ಗೋಪಾಲಾಚಾರ ಗುಡಿ, ರಾಜಗೋಪಾಲಚಾರ ಮಳಗಿ, ಜಯದೇವ ಭಟ್, ಅನಿಲ ತೆಂಬದಮನಿ ಸೇರಿದಂತೆ ಅನೇಕ ಭಕ್ತರು ಪಾಲ್ಗೊಂಡಿದ್ದರು.

## ಯೋಗಿರಾಜ ಮಹಾರಾಜರ 102ನೇ ಪುಣ್ಯಾರಾಧನಾ ಮಹೋತ್ಸವ ಸಂಪನ್ನ

# ಯೋಗಿರಾಜರ ಜೀವನ ನಮ್ಮೆಲ್ಲರಿಗೂ ದಾರಿದೀಪ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ ಮೂರು ದಿನಗಳಿಂದ ನಡೆದ ಯೋಗಿ ಪುರುಷ ಯೋಗಿರಾಜ ಮಹಾರಾಜರ 102ನೇ ಪುಣ್ಯಾರಾಧನಾ ಮಹೋತ್ಸವವು ವಿಜ್ರಂಭಣೆಯಿಂದ ಸಂಪನ್ನಗೊಂಡಿತು.

ಗದಗ ಆಧ್ಯಾತ್ಮ ವಿದ್ಯಾಶ್ರಮದ ನೀಲಮ್ಮ ತಾಯಿಯವರು ಉಪನ್ಯಾಸ ನೀಡಿ, ಲಕ್ಕುಂಡಿಯಲ್ಲಿ ಬಾಳಿಹೋದ ಯೋಗಿರಾಜರ ಜೀವನ ಮತ್ತು ಉಪಜೀವನ ನಮ್ಮೆಲ್ಲರಿಗೂ ದಾರಿದೀಪವಾಗಿದ್ದು, ಅವರ ನಿಸ್ವಾರ್ಥ ಜೀವನ ಚರಿತ್ರೆಯು ಈ ಸಮಾಜಕ್ಕೆ ಮಾರ್ಗದರ್ಶನವಾಗಿದೆ.

ಯೋಗಿರಾಜರು ಬೌದ್ಧಿಕ ಸಂಪತ್ತಿಗಿಂತ ಹೆಚ್ಚು ಆಧ್ಯಾತ್ಮಿಕ ಸಂಪತ್ತನ್ನು ಹೊಂದಿದ್ದರು. ಮೊದಲು ವ್ಯಾವಹಾರಿಕ ಬದುಕಿನಲ್ಲಿದ್ದರೂ ಸಹ ಇದು ನನ್ನದಲ್ಲ ಎಂಬ ಭಾವನೆಯಲ್ಲಿ ಇದ್ದರು. ಅರಿಷಡ್ವರ್ಗಗಳನ್ನು ಸಂಪೂರ್ಣವಾಗಿ ತ್ಯಜಿಸಿದ್ದ ಅವರು ಮೋಹ, ಮಾಯೆ, ಮಮಕಾರ ಬಂಧನದಿಂದ ದೂರವಿದ್ದರು.

ಹಲವಾರು ಸಂತರು, ಶರಣರು, ಅವಧೂತರು ಈ ನಾಡಿನಲ್ಲಿ ಬಾಳಿ ತಮ್ಮ ಹೆಜ್ಜೆ ಗುರುತುಗಳನ್ನು ಬಿಟ್ಟು ಹೋಗಿದ್ದಾರೆ. ಅವರಲ್ಲಿ ಯೋಗಿರಾಜರ ಯೋಗ ಜೀವನ ವಿಶೇಷವಾಗಿದೆ. 102 ವರ್ಷಗಳಾದರೂ ಅವರ ಹೆಜ್ಜೆ ಗುರುತುಗಳು ಇನ್ನೂ ಅಮರವಾಗಿ ಉಳಿದಿವೆ. ಆದ್ದರಿಂದ ಈ ಕ್ಷೇತ್ರ ಅತ್ಯಂತ ಜಾಗೃತವಾಗಿದ್ದು, ಪ್ರತಿ ವರ್ಷ ಅವರ ಆರಾಧನೆ ಹಮ್ಮಿಕೊಳ್ಳುತ್ತಿರುವುದು ಈ ಭಕ್ತ ಮಂಡಳಿಗೆ ಆಶೀರ್ವಾದ ದೊರೆಯುತ್ತದೆ ಎಂಬ ಆಶಾಭಾವನೆ ವ್ಯಕ್ತಪಡಿಸಿದರು.


ಗದಗ ಮಹಾಲಕ್ಷ್ಮೀ ಭಜನಾ ಮಂಡಳದಿಂದ ಭಾಗ್ಯಾ ಘಳಗಿಯವರ ನಿರ್ದೇಶನದಲ್ಲಿ ಗೊಂಡ ಶಂಕರಾಚಾರ್ಯರ ಜೀವನ ಚರಿತ್ರೆಯ 'ಬಾಲ ಶಂಕರ' ರೂಪಕ ಪ್ರದಶನಗೊಂಡಿತು.

ಕೊನೆ ದಿನದ ಆರಾಧನೆಯಲ್ಲಿ ಪ್ರಾತಃಸ್ಮರಣೆ, ಕಾಕಡಾರತಿಯೊಂದಿಗೆ ವಿದ್ಯಾಶಂಕರ ದೇವರಿಗೆ ಲಘು ರುದ್ರಾಭಿಷೇಕ ನೆರವೇರಿಸಲಾಯಿತು. ಸಂಪ್ರದಾಯದಂತೆ ಭಜನೆ ಮಾಡುತ್ತಾ ಗ್ರಾಮದ ಪ್ರಮುಖ ಭಕ್ತರ ಮನೆಗೆ ತೆರಳಿ ಬೀಮಭಿಕ್ಷಾಟನೆ ಮಾಡಲಾಯಿತು. ಪಾಲಕಿಯಲ್ಲಿ ಸದ್ಗುರುಗಳ ಪಾದುಕೆಯನ್ನು ಮೆರವಣಿಗೆ ಮಾಡಿ ಕನ್ಯೆಯರ ಬಾವಿಯಲ್ಲಿ ಪೂಜೆ ಸಲ್ಲಿಸಿ ಅವಭೃತ ಸ್ನಾನ ನೆರವೇರಿಸಲಾಯಿತು. ಇದರೊಂದಿಗೆ ಸತ್ಯನಾರಾಯಣ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ವಿವಿಧ ಜಿಲ್ಲೆಯ ಭಕ್ತರು ತಮ್ಮ ಸಂಕಲ್ಪವನ್ನು ಸಮರ್ಪಿಸಿದರು.

ರಾಜ್ಯ ಮಟ್ಟದ ಕಲಾವಿದ ನರೇಗಲ್ಲದ ವೆಂಕಟೇಶ ಕುಲಕರ್ಣಿ ನಡೆಸಿಕೊಟ್ಟ ಭಕ್ತಿ ಸಂಗೀತದ ವಿವಿಧ ಸಂತರ, ಅವಧೂತರ, ದಾಸರ, ಶರಣರ ಪದಗಳು ಜನಮನ ಸೆಳೆದವು. ಇವರೊಂದಿಗೆ ಮಾಲತಿ ಕುಲಕರ್ಣಿಯವರ ಹಾರ್ಮೋನಿಯಂ ಮತ್ತು ಉಮೇಶ ಪಾಟೀಲರ ತಬಲಾ ಸಾಥ್ ಗಮನ ಸೆಳೆಯಿತು. ಗದಗ ರಾಘವೇಂದ್ರ ಕಲಾ ಬಳಗವು ಪ್ರದರ್ಶಿಸಿದ ಪನೇಂದ್ರ ಆಚಾರ್ಯ ನಿರ್ದೇಶನದ 'ಶ್ಯಮಂತಕೋಪಾಖ್ಯಾನ' ವಿಶೇಷ ನಾಟಕದೊಂದಿಗೆ ಯೋಗಿರಾಜರ ಆರಾಧನೆಯು ಸಮಾರೋಪಗೊಂಡಿತು.

ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಕಾರ್ಯದರ್ಶಿ ಅನಿಲ ತೆಂಬದಮನಿ, ಯೋಗಿರಾಜ ಭಕ್ತ ಮಂಡಳಿಯ ಅಧ್ಯಕ್ಷ ನಾಗರಾಜ ಕುಲಕರ್ಣಿ, ಉಪಾಧ್ಯಕ್ಷ ಆರ್.ಡಿ. ದೇಸಾಯಿ, ಗುರುನಾಥ ಜೋಶಿ, ದತ್ತಣ್ಣ ಜೋಶಿ, ಎನ್.ಆರ್. ಕುಲಕರ್ಣಿ, ಎನ್.ಜಿ. ಕುಲಕರ್ಣಿ, ಆರ್.ಜಿ. ಕುಲಕರ್ಣಿ, ಜಿ.ಜಿ. ಕುಲಕರ್ಣಿ, ಶ್ರೀಕಾಂತ ದೇಸಾಯಿ ಪಾಲ್ಗೊಂಡಿದ್ದರು.

# ಮಹರ್ಷಿ ವಾಲ್ಮೀಕಿ ಜಾತ್ರೆಗೆ ಶ್ರೀಗಳಿಂದ ಆಹ್ವಾನ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ದಾವಣಗೆರೆ ಜಿಲ್ಲೆಯ ರಾಜನಹಳ್ಳಿಯಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದಲ್ಲಿ ಫೆ.8 ಮತ್ತು 9ರಂದು ನಡೆಯಲಿರುವ ಮಹರ್ಷಿ ವಾಲ್ಮೀಕಿ ಜಾತ್ರೆಗೆ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರು ಆಗಮಿಸಬೇಕೆಂದು ಗುರುಪೀಠದ ಜ.ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯಲ್ಲಿ ರಾಜನಹಳ್ಳಿಯಲ್ಲಿ ಜರುಗಲಿರುವ ಮಹರ್ಷಿ ವಾಲ್ಮೀಕಿ ಜಾತ್ರೆಗೆ ಸಮಾಜ ಬಾಂಧವರನ್ನು ಆಹ್ವಾನಿಸಿ ಮಾತನಾಡಿದರು.


ಜಾತ್ರಾ ಮಹೋತ್ಸವ, ಶ್ರೀಮಠದ 26ನೇ ವಾರ್ಷಿಕೋತ್ಸವ ಪ್ರಯುಕ್ತ ಲಿಂ.ಜ.ಪುಣ್ಯಾನಂದಪುರಿ ಸ್ವಾಮೀಜಿಯವರ 17ನೇ ವರ್ಷದ ಪುಣ್ಯಾರಾಧನೆ ಕಾರ್ಯಕ್ರಮವು ನೆರವೇರಲಿದೆ. ಸಮಾಜದವರಿಗೆ ವೈಚಾರಿಕತೆಯನ್ನು ಮೂಡಿಸುವುದು ಜಾತ್ರೆಯ ಉದ್ದೇಶವಾಗಿದೆ. ಹೀಗಾಗಿ ಸ್ವತಃ ನಾನೇ 175 ತಾಲೂಕುಗಳಿಗೂ ತೆರಳಿ ಆಹ್ವಾನ ನೀಡುತ್ತಿದ್ದೇನೆ ಎಂದರು.

ಈ ಹಿಂದಿನ ಸರಕಾರ ಮೀಸಲಾತಿ ಹೆಚ್ಚಳ ಮಾಡಿದ್ದರ ಫಲವಾಗಿ ಇತ್ತೀಚೆಗೆ ಬ್ಯಾಕ್‌ಲಾಗ್ ಹುದ್ದೆ ನೇಮಕಾತಿಯಲ್ಲಿ ಸಮಾಜದವರಿಗೆ ಅನುಕೂಲವಾಗಿದೆ. ಆದರೆ ಎಸ್‌ಸಿ/ಎಸ್‌ಟಿ ನಕಲಿ ಪ್ರಮಾಣಪತ್ರಗಳನ್ನ ಪಡೆದು ಕೆಲವರು ಸರಕಾರಿ ಉದ್ಯೋಗವನ್ನು ಪಡೆದುಕೊಂಡಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿದ್ದು, ಅಂತವರ ಮೇಲೆ ಸೂಕ್ತ ಕ್ರಮ ಕೈಕೊಳ್ಳಬೇಕು. ಇಲ್ಲದಿದ್ದರೆ ಹೋರಾಟ ಅನಿವಾರ್ಯ ಎಂದರು.

ಶಿವನಗೌಡ ಪಾಟೀಲ, ಮಂಜುನಾಥ ಶಂಕಿನದಾಸರ, ಮಹೇಂದ್ರ ಉಡಚಣ್ಣವರ, ವೀರೇಶ ತಂಗೋಡ ಮುಂತಾದವರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆಯಿಂದ ಸರ್ಕಾರಕ್ಕೆ ಮನವಿ ಸಲ್ಲಿಕೆ

# ಸದಾಶಿವ ಆಯೋಗ ವರದಿ ಜಾರಿ ಬೇಡ



■ ವಿಜಯಸಾಕ್ಷಿ ಸುದ್ದಿ, ಗದಗ

ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗವು ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಜಾತಿಗಳಲ್ಲಿ ನಾಲ್ಕು ಭಾಗಗಳನ್ನಾಗಿ ಮಾಡಿ, ಈ ಪೈಕಿ ಕೇವಲ ಮೂರು ಭಾಗಗಳಿಗೆ ಮಾತ್ರ ಮೀಸಲಾತಿಯನ್ನು ನೀಡಿ, ಉಳಿದ ಒಂದು ಭಾಗವನ್ನು ಪರಿಶಿಷ್ಟ ಜಾತಿಯಿಂದ ಕೈಬಿಡುವಂತೆ ಶಿಫಾರಸು ಮಾಡಿರುವುದು ಲಂಬಾಣಿ ಸೇರಿ ಹಲವು ಸಮುದಾಯಕ್ಕೆ ಅನ್ಯಾಯವಾಗಲಿದೆ. ಹೀಗಾಗಿ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಈ ವರದಿ ಜಾರಿಗೆ ಮುಂದಾಗಬಾರದು ಎಂದು ರಾಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆ ಒತ್ತಾಯಿಸಿದೆ.


ಈ ಕುರಿತು ಜಿಲ್ಲಾಡಳಿತ ಭವನ ಎದುರು ರಾಷ್ಟ್ರೀಯ ಸೇವಾಲಾಲ್ ಸೇನಾ ಸಂಘಟನೆ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1919ರಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಬಂಜಾರ ಸಮುದಾಯದ ಮೀಸಲಾತಿಯನ್ನು ಹಾಗೂ ಡಾ. ಬಿ.ಆರ್ ಅಂಬೇಡ್ಕರ್ ಅವರು 101 ಜಾತಿಗಳನ್ನು ಅಸ್ಪೃಶ್ಯ ಜಾತಿಗಳೆಂದು 1936ರ ಪರಿಶಿಷ್ಟ ಜಾತಿ ಆದೇಶದ ಪಟ್ಟಿ ಮೇರೆಗೆ ಸಂವಿಧಾನದ ವಿಧಿ 341(೦) ಅಡಿಯಲ್ಲಿ ಶಾಸನಬದ್ಧವಾಗಿ ಸಂವಿಧಾನದಲ್ಲಿ ನಮೂದಿಸಲಾಗಿದೆ ಎಂದು ಪ್ರತಿಭಟನಾಕಾರರು ಗಮನ ಸೆಳೆದರು.

ಸಂಘಟನೆಯ ಅಧ್ಯಕ್ಷ ಕೃಷ್ಣಪ್ಪ ಲಮಾಣಿ ನೇತೃತ್ವದಲ್ಲಿ ಮನವಿಯನ್ನು ಸಲ್ಲಿಸಲಾಯಿತು. ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಅವರು ಸ್ವೀಕರಿಸಿದರು. ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ರಾಥೋಡ್, ಖಜಾಂಚಿ ಶ್ರೀನಿವಾಸ್ ಚೌಹಾಣ್ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

ರಾಜ್ಯದ ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ಸದಾಶಿವ ಆಯೋಗ ಜಾರಿ ಮಾಡುವಂತೆ ನಿಮ್ಮ ಕ್ಷೇತ್ರದ ಶಾಸಕರ ಮೇಲೆ ಮುತ್ತಿಗೆ ಹಾಕಿ ಎಂಬ ಹೇಳಿಕೆ ನೀಡಿರುವುದು ಖಂಡನೀಯ. ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು ಬೆಳಗಾವಿ ಅಧಿವೇಶನದಲ್ಲಿ ಸದಾಶಿವ ಆಯೋಗ ವರದಿಯನ್ನು ಜಾರಿ ಮಾಡುವ ಕುರಿತು ನೀಡಿರುವ ಹೇಳಿಕೆಯನ್ನು ನಂಘಟನೆ ವಿರೋಧಿಸುತ್ತಿದ್ದು, ಕೂಡಲೇ ಅವರು ತಮ್ಮ ಹೇಳಿಕೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

# 'ಹಣವಿಲ್ಲದೆ ಭಾರತ ಯಾತ್ರೆ' ಹೊರಟ ಹರ್ಷ ಪಂಡಿತ




■ ವಿಜಯಸಾಕ್ಷಿ ಸುದ್ದಿ, ಗದಗ

ಹರಿಯಾಣದ 23 ವರ್ಷದ ಯುವಕ ಹರ್ಷ ಪಂಡಿತ ಭಾರತೀಯ ಸಂಸ್ಕೃತಿ-ಸಂಸ್ಕಾರವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಭಾರತದಾದ್ಯಂತ 1000 ದಿನಗಳ 'ಬಿನಾ ಪೈಸೆ ಭಾರತ ಯಾತ್ರೆ'ಯನ್ನು ಆಗಸ್ಟ್ 21ರಂದು ಹರಿಯಾಣದ ಕರ್ನಾಲ್ ಜಿಲ್ಲೆಯಿಂದ ಪ್ರಾರಂಭಿಸಿ, ರಾಜಸ್ಥಾನ, ಗುಜರಾತ, ಮಹಾರಾಷ್ಟ್ರ ಮತ್ತು ಗೋವಾ ಮೂಲಕ ಕರ್ನಾಟಕಕ್ಕೆ ಆಗಮಿಸಿ ಗೋಕರ್ಣ, ಶಿರಶಿ, ಹುಬ್ಬಳ್ಳಿ ಮೂಲಕ ಸಂಚರಿಸುತ್ತಿದ್ದಾರೆ.

116 ದಿನಗಳ ಕಾಲ ಸುಮಾರು 7,500 ಕೀಲೋಮೀಟರ್ ಪಾದಯಾತ್ರೆ ಮತ್ತು ಸಾರ್ವಜನಿಕ ವಾಹನಗಳ ಮೂಲಕ ಸಂಚರಿಸಿ, ಗದುಗಿಗೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಅವರನ್ನು ಭೇಟಿಯಾದ ಶ್ರೀರಾಮ ಸೇನಾ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ, ಇಂದಿನ ಸಂದರ್ಭದಲ್ಲಿ ಪಾಶ್ಚಿಮಾತ್ಯ ಸಂಸ್ಕೃತಿ ಮತ್ತು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಯುವ ಸಮುದಾಯಕ್ಕೆ ಹರ್ಷ ಪಂಡಿತ ಮಾದರಿಯಾಗಿದ್ದಾರೆ ಎಂದು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿಶ್ವನಾಥ ಶೀರಿ, ಕಿರಣ ಹಿರೇಮಠ, ಸತೀಶ ಕುಂಬಾರ, ಕಿರಣ ಕಬಾಡಿ, ನಾಗರಾಜ ಬೇವಿನಕಟ್ಟಿ, ರವಿ ಕರಬಸಣ್ಣವರ, ಅನಿಲ ಮುಳ್ಳಾಳ, ವೆಂಕಟೇಶ ದೊಡ್ಡಮನಿ, ಬಸವರಾಜ ಬನ್ನಿಮರದ, ಶರಣೇಶ ಇಟಗಿ, ರಾಚೋಟಿ ಕಾಡಪ್ಪನವರ ಮುಂತಾದರು ಉಪಸ್ಥಿತರಿದ್ದರು.

ಇವರ ಮುಂದಿನ ಸಂಚಾರದ ಬಗ್ಗೆ ತಿಳಿಯಲು ಸಾಮಾಜಿಕ ಜಾಲತಾಣಗಳಲ್ಲಿ Mr. Bhai Bhai Vlog ಅನ್ನು ವಿಕ್ಷೀಸಬಹುದಾಗಿದೆ.

# ಕಾಣೆಯಾದ ಮಹಿಳೆಯ ಪತ್ತೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಮಹಿಳೆಯೋರ್ವಳು ನಾಪತ್ತೆಯಾಗಿದ್ದು, ಈ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದೂರುದಾರ ಬೆಟಗೇರಿ ಗಾರ್ಗಿಪೇಟೆಯ ಸೋಮಣ್ಣ ವೆಂಕಣ್ಣ ಮಾದಗುಂಡಿ ಇವರ ಪತ್ನಿ ನಾಗಮ್ಮ ಸೋಮಣ್ಣ ಮಾದಗುಂಡಿ (46) ನಾಪತ್ತೆಯಾಗಿರುವ ಮಹಿಳೆಯಾಗಿದ್ದು, ಡಿ.1ರ ಸಾಯಂಕಾಲ 7.30 ಗಂಟೆಯ ಸುಮಾರಿಗೆ ತಮ್ಮ ಮನೆಯಲ್ಲಿ ಯಾರೂ ಇಲ್ಲದಿರುವ ಸಮಯದಲ್ಲಿ ಯಾರಿಗೂ ಹೇಳದೆ ಮನೆಯಿಂದ ಹೋದವಳು ಮರಳಿ ಮನೆಗೆ ಬಾರದೇ, ಯಾವುದೋ ಕಾರಣಕ್ಕೆ, ಎಲ್ಲಿಗೋ ಹೋಗಿ ಕಾಣೆಯಾಗಿದ್ದಾಳೆ.



ಈವರೆಗೂ ಹುಡುಕಾಡಿದ ದೂರುದಾರರು, ಎಲ್ಲಿಯೂ ಕಾಣಿಸದೇ ಇರುವುದರಿಂದ, ಪೊಲೀಸ್ ಠಾಣೆಯಲ್ಲಿ ಸಲ್ಲಿಸಿದ ದೂರಿನನ್ವಯ ಗುನ್ನಾ ನಂ. 94/2023 ಕಲಂ: ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.

ನಾಪತ್ತೆಯಾದ ಮಹಿಳೆ 5 ಫೂಟ್ 10 ಇಂಚು ಎತ್ತರವಿದ್ದು, ಕೋಲು ಮುಖ, ತೆಳ್ಳನೆಯ ಮೈಕಟ್ಟು, ಗೋದಿ ಮೈ ಬಣ್ಣ, ನೆಟ್ಟನೆಯ ಮೂಗು, ಕಪ್ಪು ಕಣ್ಣು, ತಲೆಯಲ್ಲಿ ಗುಂಗುರು ನೆರತ ಕೂದಲು, ಏರು ಹಣೆ, ಹುಬ್ಬ ಹಲ್ಲು ಇರುತ್ತದೆ. ಮನೆಯಿಂದ ಹೋಗುವಾಗ ತಿಳಿ ಹಳದಿ ಬಣ್ಣದ ಸೀರೆ, ಹಸಿರು ಬಣ್ಣದ ಜಂಪರ ಧರಿಸಿದ್ದು, ಕನ್ನಡ ಭಾಷೆ ಮಾತನಾಡುತ್ತಾಳೆ.

ಈ ಚಹರೆಯುಳ್ಳ ಮಹಿಳೆಯು ಕಂಡು ಬಂದಲ್ಲಿ ಬೆಟಗೇರಿ ಪೊಲೀಸ್ ಠಾಣೆ: 08372-246333. ಪಿ.ಎಸ್.ಐ. ಬೆಟಗೇರಿ ಪೊಲೀಸ್ ಠಾಣೆ-9480804449, ಗದಗ ಕಂಟ್ರೋಲ್ ರೂಮ್: 08372-238300/ 9480804400 ಇಲ್ಲಿಗೆ ಮಾಹಿತಿ ನೀಡುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಶ್ರೀ ಶರಣಬಸೇಶ್ವರ ಪುರಾಣ ಮಂಗಲೋತ್ಸವ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಜಂತ್ಲಿ ಶಿರೂರು ಗ್ರಾಮದ ಚಿಕೇನಕೊಪ್ಪದ ಚನ್ನಬಸವೇಶ್ವರ ಮಠದಲ್ಲಿ ಕಾರ್ತಿಕ ಮಾಸ ಹಾಗೂ 29ನೇ ವರ್ಷದ ಕಲಬುರ್ಗಿ ಶ್ರೀ ಶರಣಬಸೇಶ್ವರ ಪುರಾಣ ಮಂಗಲೋತ್ಸವ ಕಾರ್ಯಕ್ರಮದ ಅಂಗವಾಗಿ ಮಹಿಳೆಯರಿಂದ ಕುಂಭೋತ್ಸವ ಜರುಗಿತು.

ಮುನ್ನ ಮುತ್ತೈದೆಯರಿಗೆ ಉಡಿ ತುಂಬಿ, ಗಂಗಾ ಪೂಜೆ ಸಲ್ಲಿಸಿದ ನಂತರ ಮಹಿಳೆಯರು ಕುಂಭ ಹೊತ್ತು ಚನ್ನವೀರ ಶರಣರ ಬೆಳ್ಳಿ ಮೂರ್ತಿ ಉತ್ಸವದಲ್ಲಿ ಪಾಲ್ಗೊಂಡರು. ಮೆರವಣಿಗೆಯು ಗ್ರಾಮದ ಪ್ರಮುಖ ರಸ್ತೆಗಳ ಸಂಚರಿಸಿ ಶ್ರೀಮಠ ತಲುಪಿತು. ಶ್ರೀಮಠದಲ್ಲಿ ಮಹಾ ಮಂಗಳಾರತಿಯ ನಂತರ ಮಹಾಪ್ರಸಾದ ಸಂತರ್ಪಣೆ ನೆರವೇರಿತು. ಹಾಲಯ್ಯಸ್ವಾಮಿ ಹಿರೇಮಠ ಹಾಗೂ ಸಂಗಡಿಗರು ಪೂಜಾ ಕೈಂಕರ್ಯಗಳ ನೇತೃತ್ವ ಹವಿಸಿದ್ದರು.

# ಪರಿಷತ್‌ನಲ್ಲಿ 5 ವಿಧೇಯಕಗಳು ಚರ್ಚೆಗೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2023, ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ 2023 ಸೇರಿದಂತೆ ಐದು ವಿಧೇಯಕಗಳನ್ನು ಕಾರ್ಯದರ್ಶಿಯವರು ಡಿಸೆಂಬರ್ 12ರಂದು ವಿಧಾನ ಪರಿಷತ್ ಸಭೆಯ ಮುಂದಿಟ್ಟರು.

ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳು ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ 2023, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ಯ (ತಿದ್ದುಪಡಿ) ವಿಧೇಯಕ 2023 ಮತ್ತು ಕರಾವಳಿ ಅಭಿವೃದ್ಧಿ ಮಂಡಳಿ ವಿಧೇಯಕ 2023ಗಳನ್ನು ಕಾರ್ಯದರ್ಶಿಗಳು ಸಭೆಯ ಮುಂದಿಟ್ಟರು.

ಈ ವಿಧೇಯಕಗಳ ಪರ್ಯಾಯ ಲೋಚನೆ ಹಾಗೂ ಅಂಗೀಕಾರ ಪ್ರಕ್ರಿಯೆ ಇದೇ ಅಧಿವೇಶನದಲ್ಲಿ ನಡೆಯಲಿದೆ.

## ಕೆಯುಡಬ್ಲ್ಯೂಜೆ ರಾಜ್ಯಮಟ್ಟದ ಕ್ರಿಕೆಟ್ ಟೂರ್ನಮೆಂಟ್

# ಲಾಂಛನ ಅನಾವರಣಗೊಳಿಸಿದ ಸಿಎಂ



■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ)ದಿಂದ ಜ. 5ರಿಂದ 7ರವರೆಗೆ ಮಂಗಳೂರು ಆಡ್ಯಾರ್ ಸಹ್ಯಾದ್ರಿ ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಏರ್ಪಡಿಸಿರುವ ರಾಜ್ಯ ಮಟ್ಟದ ಕ್ರಿಕೆಟ್ ಟೂರ್ನಮೆಂಟ್(ಬ್ರ್ಯಾಂಡ್ ಮಂಗಳೂರು ರೋಹನ್ ಕಪ್) ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಗಾವಿ ಸುವರ್ಣ ಸೌಧದಲ್ಲಿ ಮಂಗಳವಾರ ಅನಾವರಣಗೊಳಿಸಿದರು.

ಜ.5ರಂದು ಸಹ್ಯಾದ್ರಿ ಕ್ರೀಡಾಂಗಣದಲ್ಲಿ ನಡೆಯುವ ಉದ್ಘಾಟನಾ ಸಮಾರಂಭಕ್ಕೆ ಮುಖ್ಯಮಂತ್ರಿಗಳನ್ನು ಆಹ್ವಾನಿಸ ಲಾಯಿತು. ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ 35ನೇ ರಾಜ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಲಾಗಿದ್ದು, ಈಗ ರಾಜ್ಯ ಮಟ್ಟದ ಕ್ರಿಕೆಟ್ ಕ್ರೀಡಾಕೂಟವನ್ನು ಸಂಘಟಿಸಲಾಗುತ್ತಿರುವ ಕುರಿತು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಯಿತು.

ಈ ಸಂದರ್ಭದಲ್ಲಿ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್, ಮಾಜಿ ಸಚಿವ ಅಭಯಚಂದ್ರ ಜೈನ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂಡಾಜೆ, ಪಂದ್ಯಾವಳಿಯ ಪ್ರಧಾನ ಸಂಚಾಲಕ ಅನ್ನು ಮಂಗಳೂರು, ಉಪಾಧ್ಯಕ್ಷ ಭಾಸ್ಕರ್ ರೈ, ಕೋಶಾಧಿಕಾರಿ ಪುಷ್ಪರಾಜ್ ಬಿ.ಎನ್, ಪದಾಧಿಕಾರಿಗಳಾದ ರಾಜೇಶ ದಡ್ಡಂಗಡಿ, ರಾಜೇಶ್ ಶೆಟ್ಟಿ, ಸಂದೇಶ ಜಾರ ಮತ್ತಿತರರಿದ್ದರು.

ನೋಂದಣಿಗೆ ಡಿ.20 ಕಡೆಯ ದಿನ: ಟೂರ್ನಮೆಂಟ್‌ಗೆ ನೋಂದಣಿ ಮಾಡಿಕೊಳ್ಳಲು ಡಿ.20 ಕೊನೆಯ ದಿನವಾಗಿದ್ದು, ಆಯಾ ಜಿಲ್ಲೆಯಿಂದ ಭಾಗವಹಿಸುವ ತಂಡಗಳು ಶೀಘ್ರವೇ ನೋಂದಣಿ ಮಾಡಿಕೊಳ್ಳುವಂತೆ ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂಡಾಜೆ ಕೋರಿದ್ದಾರೆ.



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ನಗರದ ಟರ್ನಲ್ ಪೇಟೆಯಲ್ಲಿರುವ ಶ್ರೀ ಮಂಜುನಾಥ ದೇವಸ್ಥಾನದ 40ನೇ ವರ್ಷದ ಕಾರ್ತಿಕ ಮಾಸದ ದೀಪೋತ್ಸವ, ಧಾರ್ಮಿಕ ಕಾರ್ಯಕ್ರಮ ಹಿನ್ನೆಲೆಯಲ್ಲಿ ಸೋಮವಾರ ಗದಗ-ಬೆಟಗೇರಿ ಅವಳಿ ನಗರದ ಮೋಚಿಗಾರ ಸಮುದಾಯದ ಮಹಿಳೆಯರು, ಭಕ್ತರು ಶ್ರೀದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka